ಸಂಪಾದಕರು: ದರ್ಶನ್.ಟಿ
Editor : DARSHAN.T

# ನಮ್ಮ ಜನ
NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 51 | Volume - 01 Issue - 51
ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | Title- Code: KARKAN 28269
ಚಿತ್ರದುರ್ಗ | Chitradurga
ದಿನಾಂಕ: 29–08–2023 ಮಂಗಳವಾರ | Date: 29-08-2023 Tuesday
ಪುಟ: 4 | Page: 4
ಬೆಲೆ : ರೂ.2–00 | Price: Rs. 2-00

ಒಳಪುಟದ ಸುದ್ದಿಗಳು
ಸೆ.3 ರಂದು ಶಿಕ್ಷಕರ ಅರ್ಹತಾ ಪರೀಕ್ಷೆ: ಪರೀಕ್ಷಾ ಕೇಂದ್ರಗಳಲ್ಲಿನ ಸೌಕರ್ಯಗಳ ಬಗ್ಗೆ ಗಮನ ಹರಿಸಿ 2
ಗ್ಯಾರಂಟಿ ಯೋಜನೆ ದುರ್ಬಳಕೆಯಾಗದಂತೆ ಪರಿಶೀಲಿಸಿ ಅನುಮೋದಿಸಿ: ಉಸ್ತುವಾರಿ ಕಾರ್ಯದರ್ಶಿ ಗುಂಜನ್ ಕೃಷ್ಣ 3
ಶಕ್ತಿ ಯೋಜನೆ: ಓಬವ್ವ ನಾಡಿನಲ್ಲಿ ಮಹಿಳೆಯರಿಂದ ಉತ್ತಮ ಸ್ಪಂದನೆ 4

## ಫಾಸ್ಟ್ ನ್ಯೂಸ್

### ರಕ್ತ ಕೊಟ್ಟೇವು ನೀರು ಕೊಡೆವು ಎಂದು ಮಂಡ್ಯ ಜಿಲ್ಲೆಯ ರೈತರ ಘೋಷಣೆ

ತಮಿಳುನಾಡಿಗೆ 15 ದಿನ 5,000 ಕ್ಯೂಸೆಕ್ ನೀರು ಹರಿಸುವಂತೆ ಕಾವೇರಿ ನೀರು ನಿರ್ವಹಣಾ ಸಮಿತಿ ಆದೇಶ ಹೊರಡಿಸಿದ ಹಿನ್ನೆಲೆ ಆಕ್ರೋಶಗೊಂಡಿರುವ ಮಂಡ್ಯ ರೈತರು, ರಕ್ತ ಕೊಟ್ಟೇವು ನೀರು ಕೊಡೆವು ಎಂದು ಹೇಳಿದ್ದಾರೆ. ನಾಳಿನ ಸಭೆ ನೋಡಿ ಹೋರಾಟದ ರೂಪರೇಷೆಗೆ ರೈತರ ತೀರ್ಮಾನ ಮಾಡಿದ್ದಾರೆ. ಕೇಸ್ ಹಾಕಿದರೆ ಜೈಲಿಗೆ ಹೋಗಲು ಸಿದ್ಧ ಎಂದು ಅನ್ನದಾತರು ಹೇಳಿದ್ದಾರೆ.

### ಆಯಾಯ ಕ್ಷೇತ್ರದ ಶಾಸಕರು ಗೃಹಲಕ್ಷ್ಮಿ ಯೋಜನೆ ಅನುಷ್ಠಾನಕ್ಕೆ ಮುಂದಾಗಬೇಕು: ಡಿಕೆಶಿ



ಮೈಸೂರು: ಗೃಹಲಕ್ಷ್ಮೀ ಯೋಜನೆ ಜಾರಿ ಬಗ್ಗೆ ಮಾತನಾಡಿದ ಡಿಸಿಎಂ ಡಿಕೆ ಶಿವಕುಮಾರ್, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಯಲ್ಲಿ ಮಾಡಿರುವ ವ್ಯವಸ್ಥೆ ಬಗ್ಗೆ ಇಂದು ಡ್ರೈ ರನ್ ಮಾಡಿದ್ದೇವೆ. ಎಲ್ಲಾ ಕಡೆ ಮಾಡಿಕೊಂಡಿರುವ ಸಿದ್ಧತೆ ಪರಿಶೀಲಿಸಿದ್ದೇವೆ. ನಾಳೆಯೂ ಪರಿಶೀಲನೆ ಮಾಡುತ್ತೇವೆ. ಕಾರ್ಯಕ್ರಮದಲ್ಲಿ ಭಾಗಿಯಾಗುವುದು ಮಾತ್ರ ಮುಖ್ಯವಲ್ಲ. ಈಗಾಗಲೇ 50 ಲಕ್ಷ ಫಲಾನುಭವಿಗಳಿಗೆ ಪಟ್ಟಿ ರೆಡಿಯಾಗಿದೆ. ಹಂತ ಹಂತವಾಗಿ ಎಲ್ಲಾ ಫಲಾನುಭವಿಗಳಿಗೂ ಗೃಹಲಕ್ಷ್ಮಿ ಯೋಜನೆ ಹಣ ತಲುಪಲಿದೆ. ಈ ಕಾರ್ಯಕ್ರಮ ಪಕ್ಷಾತೀತವಾಗಿದೆ. ಆಯಾಯ ಕ್ಷೇತ್ರದ ಶಾಸಕರು ಗೃಹಲಕ್ಷ್ಮಿ ಯೋಜನೆ ಅನುಷ್ಠಾನಕ್ಕೆ ಮುಂದಾಗಬೇಕು ಎಂದರು.

# ಶತದಿನ ಸಂಭ್ರಮದ ಹೊಸ್ತಿಲಲ್ಲಿ ಸರ್ಕಾರ

## ಕೋಟೆನಾಡಿನ ಮನೆ ಮನ ಬೆಳಗಿದ "ಗೃಹ ಜ್ಯೋತಿ" – ಚಿತ್ರದುರ್ಗ: ಜಿಲ್ಲೆಯಲ್ಲಿ 3.37 ಲಕ್ಷ ಫಲಾನುಭವಿಗಳು ನೋಂದಣಿ



» ಚಿತ್ರದುರ್ಗ

ರಾಜ್ಯದ ನೂತನ ಸರ್ಕಾರವು ಅಸ್ತಿತ್ವಕ್ಕೆ ಬಂದು ಶತದಿನ ಸಂಭ್ರಮದ ಹೊಸ್ತಿಲಲ್ಲಿದೆ. ಸರ್ಕಾರವು ಚುನಾವಣೆಗೂ ಮುನ್ನ ಘೋಷಿಸಿದ್ದ ಐದು ಗ್ಯಾರಂಟಿಗಳ ಪೈಕಿ ಒಂದಾದ 200 ಯುನಿಟ್ ವರೆಗಿನ ಉಚಿತ ವಿದ್ಯುತ್ ಪೂರೈಕೆಯ ಗೃಹಜ್ಯೋತಿ ಯೋಜನೆಯನ್ನು ಜಾರಿಗೊಳಿಸಿ, ನುಡಿದಂತೆ ನಡೆದಿದೆ.

ಯೋಜನೆಗಾಗಿ ನೊಂದಣಿ ಕಾರ್ಯಕ್ಕೆ ಜೂನ್ 18ರಂದು ಅಧಿಕೃತವಾಗಿ ಚಾಲನೆ ಸಿಕ್ಕಿದ್ದು, ಗೃಹ ಜ್ಯೋತಿ ಯೋಜನೆಯಡಿ 200 ಯೂನಿಟ್ ವರೆಗೆ ಉಚಿತ ವಿದ್ಯುತ್ ಪಡೆಯಬಹುದಾಗಿದೆ. ಈಗಾಗಲೆ ಯೋಜನೆ ಜಾರಿಗೊಂಡಿದ್ದು, ಗ್ರಾಹಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ರಾಜ್ಯ ಸರ್ಕಾರದ "ಗೃಹ ಜ್ಯೋತಿ" ಯೋಜನೆಗೆ ಐತಿಹಾಸಿಕ ಕೋಟೆನಾಡು ಚಿತ್ರದುರ್ಗ ಜಿಲ್ಲೆಯಲ್ಲಿ 337964 ಫಲಾನುಭವಿಗಳು ನೋಂದಾಯಿಸಿಕೊಂಡಿದ್ದಾರೆ.

ಜಿಲ್ಲೆಯಲ್ಲಿ 4.7 ಲಕ್ಷ ಗೃಹ ವಿದ್ಯುತ್ ಬಳಕೆದಾರರು ಇದ್ದು, ಇದರಲ್ಲಿ ಜುಲೈ ಅಂತ್ಯದವರೆಗೂ 3.37 ಲಕ್ಷ ಗೃಹ ವಿದ್ಯುತ್ ಬಳಕೆದಾರರು ಗೃಹಜ್ಯೋತಿ ಯೋಜನೆಗೆ ನೋಂದಾಯಿಸಿಕೊಂಡಿದ್ದಾರೆ. ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ವ್ಯಾಪ್ತಿಯ ಚಿತ್ರದುರ್ಗ ವಿಭಾಗದಲ್ಲಿ ಚಿತ್ರದುರ್ಗ ತಾಲ್ಲೂಕು, ಹೊಳಲ್ಕೆರೆ ಹಾಗೂ ಹೊಸದುರ್ಗ ತಾಲ್ಲೂಕುಗಳನ್ನು ಒಳಗೊಂಡಿದೆ. ಹಿರಿಯೂರು ವಿಭಾಗದಲ್ಲಿ ಹಿರಿಯೂರು ತಾಲ್ಲೂಕು, ಚಳ್ಳಕೆರೆ ಹಾಗೂ ಮೊಳಕಾಲ್ಮುರು ತಾಲ್ಲೂಕುಗಳನ್ನು ಒಳಗೊಂಡಿದೆ.

**ಚಿತ್ರದುರ್ಗ ವಿಭಾಗ:** ಚಿತ್ರದುರ್ಗ ತಾಲ್ಲೂಕಿನಲ್ಲಿ 121426 ಸ್ಥಾಪರಗಳಿದ್ದು, ಗೃಹ ಜ್ಯೋತಿ ಯೋಜನೆಗೆ 96238 ಫಲಾನುಭವಿಗಳು ನೋಂದಾಯಿಸಿಕೊಂಡಿದ್ದಾರೆ. 25188 ನೋಂದಣಿಗೆ ಬಾಕಿ ಇದೆ. ಹೊಳಲ್ಕೆರೆ ತಾಲ್ಲೂಕಿನಲ್ಲಿ 47221 ಸ್ಥಾವರಳಿದ್ದು, ಗೃಹ ಜ್ಯೋತಿ ಯೋಜನೆಗೆ 41316 ಫಲಾನುಭವಿಗಳು ನೋಂದಾಯಿಸಿಕೊಂಡಿದ್ದಾರೆ. 5905 ನೋಂದಣಿಗೆ ಬಾಕಿ ಇದೆ. ಹೊಸದುರ್ಗ ತಾಲ್ಲೂಕಿನಲ್ಲಿ 64483 ಸ್ಥಾವರಳಿದ್ದು, 56757 ಫಲಾನುಭವಿಗಳು ಗೃಹಜ್ಯೋತಿ ಯೋಜನೆಗೆನೋಂದಾಯಿಸಿಕೊಂಡಿದ್ದಾರೆ. 7726 ನೋಂದಣಿಗೆ ಬಾಕಿ ಇವೆ. ಚಿತ್ರದುರ್ಗ ವಿಭಾಗದಲ್ಲಿ ಒಟ್ಟು 233130 ಸ್ಥಾವರಳಿದ್ದು, ಗೃಹಜ್ಯೋತಿ ಯೋಜನೆಗೆ 194311 ಫಲಾನುಭವಿಗಳು ನೋಂದಾಯಿಸಿಕೊಂಡಿದ್ದಾರೆ. 38819 ಫಲಾನುಭವಿಗಳು ನೋಂದಣಿಗೆ ಬಾಕಿ ಇದೆ.



**ಹಿರಿಯೂರು ವಿಭಾಗ:** ಹಿರಿಯೂರು ತಾಲ್ಲೂಕಿನಲ್ಲಿ 68659 ಸ್ಥಾವರಗಳಿದ್ದು, ಗೃಹಜ್ಯೋತಿ ಯೋಜನೆಗೆ 54983 ಫಲಾನುಭವಿಗಳು ನೋಂದಾಯಿಸಿಕೊಂಡಿದ್ದಾರೆ. 13676 ಫಲಾನುಭವಿಗಳು ನೋಂದಣಿಬಾಕಿಇದೆ.ಚಳ್ಳಕೆರೆತಾಲ್ಲೂಕಿನಲ್ಲಿ 75422 ಸ್ಥಾವರಗಳಿದ್ದು, ಗೃಹಜ್ಯೋತಿ ಯೋಜನೆಗೆ 62148 ಫಲಾನುಭವಿಗಳು ನೋಂದಾಯಿಸಿಕೊಂಡಿದ್ದಾರೆ. 13274 ಫಲಾನುಭವಿಗಳು ನೋಂದಣಿಗೆ ಬಾಕಿ ಇದೆ. ಮೊಳಕಾಲ್ಮುರು ತಾಲ್ಲೂಕಿನಲ್ಲಿ 30208 ಸ್ಥಾವರಗಳಿದ್ದು, 26522 ಫಲಾನುಭವಿಗಳುಗೃಹಜ್ಯೋತಿಯೋಜನೆಗೆ ನೋಂದಾಯಿಸಿಕೊಂಡಿದ್ದಾರೆ. 3686 ನೋಂದಣಿಗೆ ಬಾಕಿ ಇದೆ. ಹಿರಿಯೂರು ವಿಭಾಗದಲ್ಲಿಒಟ್ಟು174289ಸ್ಥಾವರಗಳಿದ್ದು, 143653 ಫಲಾನುಭವಿಗಳು ಗೃಹಜ್ಯೋತಿ ಯೋಜನೆಗೆ ನೋಂದಾಯಿಸಿದ್ದಾರೆ. 30636 ನೋಂದಣಿಗೆ ಬಾಕಿ ಇದೆ.

ಚಿತ್ರದುರ್ಗ ಜಿಲ್ಲೆಯಲ್ಲಿ ಒಟ್ಟು 407419 ಸ್ಥಾವರಗಳಿದ್ದು, ಗೃಹಜ್ಯೋತಿ ಯೋಜನೆಗೆ 337964 ಫಲಾನುಭವಿಗಳು ನೋಂದಾಯಿಸಿಕೊಂಡಿದ್ದಾರೆ. ಇನ್ನೂ 69455 ಫಲಾನುಭವಿಗಳು ನೋಂದಣಿಗೆ ಬಾಕಿ ಇದೆ.

ಗೃಹಜ್ಯೋತಿ ಯೋಜನೆಯಡಿ ಪ್ರತಿ ಗೃಹ ಬಳಕೆದಾರರು ಗರಿಷ್ಟ 200 ಯುನಿಟ್‌ವರೆಗೆ ವಿದ್ಯುತ್ ಉಚಿತವಾಗಿ ಪಡೆಯಬಹುದಾಗಿದೆ. ಗೃಹ ಬಳಕೆ ವಿದ್ಯುತ್ ಗ್ರಾಹಕರು ಈ ಯೋಜನೆಗೆ ಅರ್ಹರಾಗಿದ್ದಾರೆ. ಈ ಯೋಜನೆ ಜಾರಿಯಿಂದ ಗ್ರಾಹಕರ ಮೇಲಿನ ಆರ್ಥಿಕ ಹೊರೆ ತಪ್ಪಿದ್ದು, ಗೃಹಜ್ಯೋತಿ ಯೋಜನೆ ಜನಸಾಮಾನ್ಯರ ಆಶಾಕಿರಣವಾಗಿದೆ.

ಈ ಯೋಜನೆಯು ಗೃಹ ಬಳಕೆಯ ವಿದ್ಯುತ್ ಸಂಪರ್ಕಗಳಿಗೆ ಮಾತ್ರ ಅನ್ವಯವಾಗುತ್ತದೆ. ವಾಣಿಜ್ಯ ಉದ್ದೇಶಗಳಿಗೆ ಅನ್ವಯವಾಗುವುದಿಲ್ಲ. ಈ ಯೋಜನೆಯಡಿ ಸೌಲಭ್ಯ ಪಡೆಯಲು ಗ್ರಾಹಕರು ಸೇವಾ ಸಿಂಧು ಫೋರ್ಟಲ್ ಮೂಲಕ ಅರ್ಜಿ ಸಲ್ಲಿಸಬೇಕಿದೆ. ಪ್ರತಿ ಫಲಾನುಭವಿ ಗ್ರಾಹಕರ ಸಂಖ್ಯೆ ಮತ್ತು ಮೀಟರ್ ಸಂಖ್ಯೆಯನ್ನು ಆಧಾರ್‌ಗೆ ಕಡ್ಡಾಯವಾಗಿ ಜೋಡಣೆ ಮಾಡಬೇಕಿದೆ.

### ಶೂನ್ಯ ಬಿಲ್ ಖುಷಿ ತಂದಿದೆ

ನಮ್ಮ ಮನೆಯಲ್ಲಿ ಕಳೆದ ಜೂನ್ ತಿಂಗಳು 675 ಬಿಲ್ ಬಂದಿತ್ತು. ಇದೀಗ ಗೃಹಜ್ಯೋತಿ ಯೋಜನೆಯಡಿ 200 ಯುನಿಟ್‌ವರೆಗೆ ವಿದ್ಯುತ್ ಉಚಿತವಾಗಿ ಪಡೆದಿರುವುದರಿಂದ ಶೂನ್ಯ ಬಿಲ್ ಬಂದಿರುವುದು ನಮಗೆ ಅತೀವ ಖುಷಿ ತಂದಿದೆ. ಕರೆಂಟ್ ಬಿಲ್ ನಲ್ಲಿ ಉಳಿತಾಯವಾದ ಹಣದಲ್ಲಿ ಮಕ್ಕಳಿಗೆ ಒಳ್ಳೆಯ ಬಟ್ಟೆ ಖರೀದಿಸಿದ್ದೇನೆ.

» ಪಾಲಮ್ಮ, ಗ್ರಾಹಕರು, ಬಚ್ಚಬೋರನಹಟ್ಟಿ,



ಮೈಸೂರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈಸೂರಿನಲ್ಲಿ ಇಂದು ಸಂಜೆ ಮಾನಸ ಗಂಗೋತ್ರಿಯ ಆಯ್ದ ವಿದ್ಯಾರ್ಥಿ ಸಮೂಹದ ಜತೆ ಸಂವಾದ ನಡೆಸಿದರು. 200 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಡಾ.ಯತೀಂದ್ರ ಸಿದ್ದರಾಮಯ್ಯ ಅವರು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ಗೃಹಲಕ್ಷ್ಮಿಗೆ 30ರಂದು ಚಾಲನೆ

## ನಗರದ ಸ್ವಚ್ಛತೆಗೆ ಮೊದಲ ಆದ್ಯತೆ: ಶಾಸಕ ಟಿ.ರಘುಮೂರ್ತಿ



» ಚಳ್ಳಕೆರೆ

ಅಧಿಕಾರಿಗಳು ನಗರದ ಸ್ವಚ್ಚತೆಗೆ ಮೊದಲ ಆದ್ಯತೆ ನೀಡುವ ಜೊತೆಗೆ ಎಲ್ಲಾ ನೀರು ಸಂಗ್ರಹಣ ಟ್ಯಾಂಕ್ ಗಳನ್ನು ಸ್ವಚ್ಚಗೊಳಿಸಬೇಕು. ಆರೋಗ್ಯ ಅಧಿಕಾರಿಗಳು ಜನರಿಗೆ ತೊಂದರೆ ಆಗದಂತೆ ಗಮನಹರಿಸಿ ಎಂದು ಶಾಸಕ ಟಿ.ರಘುಮೂರ್ತಿ ಸೂಚನೆ ನೀಡಿದರು.

ಚಳ್ಳಕೆರೆ ನಗರಸಭೆ ಕಾರ್ಯಾಲಯದಲ್ಲಿ ಜನ ಸಂಪರ್ಕ ಸಭೆ ಮತ್ತು ಗೃಹಲಕ್ಷ್ಮಿ ಯೋಜನೆ ಅನುಷ್ಠಾನ ಕುರಿತು ತಾಲ್ಲೂಕು ಮಟ್ಟದ ಅಧಿಕಾರಿಗಳ ಪೂರ್ವ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ನಗರದಲ್ಲಿ ಸಮುದಾಯ ಆರೋಗ್ಯ ಅಧಿಕಾರಿಗಳು ನಗರ ಮತ್ತು ಗ್ರಾಮೀಣ ಭಾಗದಲ್ಲಿ ಸ್ವಚ್ಚತೆಗೆ ಹೆಚ್ಚಿನ ಒತ್ತು ಕೊಟ್ಟು ಕೆಲಸ ಮಾಡಬೇಕು. ಜನರ ಆರೋಗ್ಯ ಮೇಲೆ ಪರಿಣಾಮ ಬೀರದಂತೆ ಮುಂಜಾಗ್ರತೆಯಾಗಿ ಕ್ರಮಗಳನ್ನು ಜರುಗಿಸಿ ಅಗತ್ಯವಾದ ಸಹಕಾರ ನೀಡುತ್ತೇನೆ. ನನ್ನ ಕ್ಷೇತ್ರದಲ್ಲಿ ಎಲ್ಲಾ ಕಡೆ ನೀರಿನ ತೊಟ್ಟಿಗಳು, ಓವರ್ ಹೆಡ್ ಟ್ಯಾಂಕ್ ಗಳು, ನೆಲತೊಟ್ಟಿಗಳು ಸ್ವಚ್ಚತೆ ಮಾಡಬೇಕು ,ನೀರಿನ ಸಂಪರ್ಕ ಲೈನ್ ಗಳು ಎಲ್ಲೂ ಸಹ ಕಲುಷಿತ ನೀರು ಬೆರಕೆಯಾಗದಂತೆ ಪೈಪ್ ಲೈನ್ ತುರ್ತಾಗಿ ದುರಸ್ತಿ ಕಾರ್ಯ ಮಾಡಬೇಕು ಎಂದರು.

ಪುಟ ↘ 2



## ಫಾಸ್ಟ್ ನ್ಯೂಸ್

### ಗೃಹಲಕ್ಷ್ಮಿಗೆ 30ರಂದು ಚಾಲನೆ: ರಘುಮೂರ್ತಿ

» ಮೊದಲ ಪುಟದಿಂದ

ಇ ಸ್ವತ್ತು ಕಾಲಮಿತಿಯೊಳಗೆ ವಿತರಿಸಿ: ಸಾರ್ವಜನಿಕರಿಗೆ ಇ ಸ್ವತ್ತು ವಿತರಣೆಯನ್ನು ನಿಗದಿತ ಅವಧಿಯೊಳಗೆ ವಿತರಣೆ ಮಾಡಬೇಕು. ಸುಖಾ ಸುಮ್ಮನೆ ಜನರನ್ನು ಅಲೆದಾಡಿಸಿದರೇ ನಾನು ಸಹಿಸುವುದಿಲ್ಲ. ನಗರಸಭೆಯ ಎಲ್ಲಾ ಸೌಲಭ್ಯಗಳನ್ನು ಸಹ ನಿಗದಿತ ಸಮಯದಲ್ಲಿ ಜನರಿಗೆ ಮುಟ್ಟಿಸುವ ಕೆಲಸ ಆಗಬೇಕು. ಜನರಿಂದ ದೂರುಗಳು ಬರಬಾರದು ಒಂದು ವೇಳೆ ದೂರುಗಳು ಬಂದರೆ ನಾನು ಅಂತಹ ಅಧಿಕಾರಿಗಳ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು.ರಾಜ್ಯದ ಮತದಾರರಿಗೆ ನೀಡಿದ ಭರವಸೆಯಂತೆ ಎಲ್ಲಾ ಯೋಜನೆಗಳ ಅನುಷ್ಠಾನಕ್ಕೆ ಆದ್ಯತೆ ನೀಡಿದೆ. ಗೃಹಲಕ್ಷ್ಮಿ ಯೋಜನೆಯಿಂದ ಮಹಿಳೆಯರಿಗೆ ಸರ್ಕಾರ ನೀಡಿದ ಭರವಸೆ ಪೂರ್ಣಪ್ರಮಾಣದಲ್ಲಿ ಈಡೇರಿಸುವ ದಿಕ್ಕಿನಲ್ಲಿ ದೃಢ ಹೆಜ್ಜೆ ಇಟ್ಟಿದೆ. ರಾಜ್ಯದಾದ್ಯಂತ ಒಂದೇ ಹಂತದಲ್ಲಿ ಯೋಜನೆ ಅನುಷ್ಠಾನಕ್ಕೆ ಸರ್ಕಾರ ನಿರ್ದೇಶನ ನೀಡಿದ್ದು ಆಗಸ್ಟ್ 30ರ ಬುಧವಾರ ನಗರಸಭೆ ಕಚೇರಿ ಆವರಣದಲ್ಲಿ ಚಾಲನೆ ನೀಡಲಾಗುವುದು ಎಂದರು.ಪ್ರಾಸ್ತಾವಿಕವಾಗಿ ಮಾತನಾಡಿದ ಶಿಶು ಮತ್ತು ಮಹಿಳಾ ಕಲ್ಯಾಣಾಧಿಕಾರಿ ಹರಿಪ್ರಸಾದ್ ಗೃಹಲಕ್ಷ್ಮಿ ಯೋಜನೆ ಅನುಷ್ಠಾನ ಕುರಿತು ಈಗಾಗಲೇ ಶಾಸಕ ಮಾರ್ಗದರ್ಶನದಲ್ಲಿ ಚಿಂತನೆ ನಡೆಸಿದ್ದು, ತಾಲ್ಲೂಕಿನ 488 ಅಂಗನವಾಡಿ ಕೇಂದ್ರಗಳಲ್ಲಿ ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು ಮನೆ, ಮನೆಗೂ ತೆರಳಿ ಮಹಿಳೆಯರಿಗೆ ಕುಂಕಮ, ಅರಿಸಿನ, ಹೂ ನೀಡುವ ಮೂಲಕ ಯೋಜನೆ ಅನುಷ್ಠಾನಕ್ಕೆ ಆಹ್ವಾನಿಸುತ್ತಿದ್ದಾರೆ. ಇದುವರೆಗೂ ಒಟ್ಟು 77537 ಅರ್ಜಿಗಳು ನೊಂದಾವಣೆಯಾಗಿವೆ. ಗ್ರಾಮೀಣ ಮಟ್ಟದಲ್ಲೂ ಸಹ ಮಹಿಳೆಯರಲ್ಲಿ ಗೃಹಲಕ್ಷ್ಮಿ ಯೋಜನೆ ಅನುಷ್ಠಾನ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ ಎಂದರು. ಪೂರ್ವಭಾವಿ ಸಭೆಯಲ್ಲಿ ತಹಶೀಲ್ದಾರ್ ರೇಹಾನ್ ಪಾಷ, ಜಿಲ್ಲಾ ಯೋಜನಾ ನಿರ್ದೇಶಕ ಮಹೇಂದ್ರಕುಮಾರ್, ಎಇಇ ಸತ್ಯನಾರಾಯಣ, ಪೌರಾಯುಕ್ತ ಸಿ.ಚಂದ್ರಪ್ಪ, ಇನ್ಸ್ಪೆಕ್ಟರ್ ದೇಸಾಯಿ, ಎಇಇ ವಿಜಯಭಾಸ್ಕರ್, ಕಾವ್ಯ, ಬಿಇಒ ಕೆ.ಎಸ್.ಸುರೇಶ್, ಕೃಷಿ ಅಧಿಕಾರಿ ಜೆ.ಅಶೋಕ್, ತೋಟಗಾರಿಕೆ ಅಧಿಕಾರಿ ವಿರೂಪಾಕ್ಷಪ್ಪ, ಬಿಸಿಎಂ ಅಧಿಕಾರಿ ದಿವಾಕರ್ ಮುಂತಾದವರು ಉಪಸ್ಥಿತರಿದ್ದರು.

### ಸುಪ್ರೀಂ ನೀಡುವ ಆದೇಶದಂತೆ ಕ್ರಮ ಕೈಗೊಳ್ಳುತ್ತೇವೆ: ಡಿಕೆಶಿ

ಮೈಸೂರು: ತಮಿಳುನಾಡಿಗೆ ನಿತ್ಯ 5 ಸಾವಿರ ಕ್ಯೂಸೆಕ್ ನೀರು ಹರಿಸಲು ಸೂಚನೆ ವಿಚಾರವಾಗಿ ಮಾತನಾಡಿದ ಡಿಸಿಎಂ ಡಿಕೆ ಶಿವಕುಮಾರ್, ಇದೇ ಅಂತಿಮವಲ್ಲ, ನಾಳೆ ಸುಪ್ರೀಂಕೋರ್ಟ್‌ನಲ್ಲಿ ಮನವಿ ಸಲ್ಲಿಸುತ್ತೇವೆ. ಸುಪ್ರೀಂಕೋರ್ಟ್ ನೀಡುವ ಆದೇಶದಂತೆ ಕ್ರಮ ಕೈಗೊಳ್ಳುತ್ತೇವೆ. ನಮ್ಮ ರೈತರ ಹಿತ ಮುಖ್ಯ, ವಿವಾದ ಬಗೆಹರಿಯುವುದು ಅಷ್ಟೇ ಮುಖ್ಯ. ನಾವು ಬಿಟ್ಟ ನೀರು ಬಿಳಿಗುಂಡ್ಲು ಮಾಪನ ಕೇಂದ್ರ ತಲುಪಲು 5 ದಿನ ಬೇಕು. ಬೀಗ ಅವರ ಕೈಯಲ್ಲಿದೆ, ಎಷ್ಟು ನೀರು ಬಿಡುತ್ತೇವೆ ಎಂಬುದರಲ್ಲಿ ಗೊಂದಲವಿಲ್ಲ ಎಂದರು.

### ಸಬ್ಸಿಡಿ ಕೊಟ್ಟರೆ ಗ್ರಾಮೀಣ ಭಾಗಕ್ಕೂ ಇ-ಬಸ್ ವ್ಯವಸ್ಥೆ: ರಾಮಲಿಂಗಾರೆಡ್ಡಿ

ರಾಯಚೂರು: ಕೇಂದ್ರದ ಇ-ಬಸ್ ಯೋಜನೆಯಿಂದ ರಾಜ್ಯಕ್ಕೆ ಹೆಚ್ಚುವರಿ ಬಸ್ ಬೇಡಿಕೆ ವಿಚಾರವಾಗಿ ಮಾತನಾಡಿದ ಸಚಿವ ರಾಮಲಿಂಗಾರೆಡ್ಡಿ, ಮೊನ್ನೆ ಪತ್ರ ಬಂದಿದೆ. ಪ್ರಧಾನಿ ಮಂತ್ರಿಗಳು ದೇಶ್ಯಾದ್ಯಂತ 15000 ಬಸ್ ಕೊಡ್ತಿನಿ ಅಂತ ಹೇಳಿದ್ದಾರೆ. ಈ ಬಸ್ ಗಳು ಬಹಳ ದುಬಾರಿಯಾಗಿವೆ. ಹೀಗಾಗಿ ಸಬ್ಸಿಡಿ ಕೊಡಬೇಕು. ಈ ಹಿಂದೆ ಸಬ್ಸಿಡಿ ಕೊಡುತ್ತಿದ್ದರು. ಈಗ ನಿಲ್ಲಿಸಿದ್ದಾರೆ. ಈಗ ಮತ್ತೆ ಸಬ್ಸಿಡಿ ಕೊಟ್ಟರೆ ನಗರ ಅಷ್ಟೇ ಅಲ್ಲ ಗ್ರಾಮೀಣ ಭಾಗದಲ್ಲೂ ಈ ಬಸ್‌ಗಳನ್ನ ಹಾಕಬಹುದು. ಈಗ 24000 ಬಸ್ ಗಳಿವೆ. 10 ವರ್ಷಗಳ ಹಿಂದೆಯೂ ಇಷ್ಟೆ ಬಸ್ ಗಳಿದ್ದವು. ಈಗ ಜನಸಂಖ್ಯೆ ಹೆಚ್ಚಿರುವುದರಿಂದ ಇನ್ನೂ 10-12 ಸಾವಿರ ಬಸ್‌ಗಳ ಅವಶ್ಯಕತೆಯಿದೆ ಎಂದರು.

### ಬೆಂಗಳೂರಿನಲ್ಲಿ ಕಾಂಗ್ರೆಸ್ ವಿರುದ್ಧ ಮಾಜಿ ಸಚಿವ ಡಾ.ಸುಧಾಕರ್ ಕಿಡಿ

ಕೊವಿಡ್ ಅಕ್ರಮದ ತನಿಖೆಗೆ ಆಯೋಗ ರಚನೆ ಮಾಡಿದ ವಿಚಾರವಾಗಿ ಮಾತನಾಡಿದ ಮಾಜಿ ಆರೋಗ್ಯ ಸಚಿವ ಕೆ ಸುಧಾಕರ್, ಸರ್ಕಾರ ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ಸಮಿತಿ ರಚನೆ ಮಾಡಿದೆ. ನಮ್ಮ ಸರ್ಕಾರದ ಅವಧಿಯಲ್ಲಿ ಕೊವಿಡ್ ನಿಯಂತ್ರಿಸಲು ಸಫಲ ಆಗಿತ್ತು. ಈಗ ಅಕ್ರಮ ಆಗಿದೆ ಅಂತಾ ಆರೋಪ ಮಾಡಿ ತನಿಖೆಗೆ ಮುಂದಾಗಿದ್ದಾರೆ. ಇದು ರಾಜಕೀಯ ಪ್ರೇರಿತ ಎಂದರು. ಕೊವಿಡ್ ವಿಚಾರದಲ್ಲಿ ಸರ್ಕಾರಕ್ಕೆ ಕಾಂಗ್ರೆಸ್ಸಿಗರು ಸಹಕಾರ ಕೊಡಲಿಲ್ಲ. ಕೊವಿಡ್ ಇದ್ದಾಗ ಕಾಂಗ್ರೆಸ್‌ನವರಿಗೆ ಸಾಮಾಜಿಕ ಜವಾಬ್ದಾರಿ ಇರಲಿಲ್ಲ. ಆಗ ಪಾದಯಾತ್ರೆ ಮಾಡಿದವರ ವಿರುದ್ಧ ಪ್ರಕರಣ ಹಾಕಲಾಗಿತ್ತು. ಇವರ ಸರ್ಕಾರ ಬಂದ ನಂತರ ಆ ಕೇಸ್‌ಗಳನ್ನೆಲ್ಲಾ ಹಿಂಪಡೆದಿದ್ದಾರೆ. ತನಿಖೆ ನಡೆಸುವ ಉದ್ದೇಶ ಇದ್ದಿದ್ದರೆ ಲೋಕಾಯುಕ್ತಕ್ಕೆ ಕೊಡಬಹುದಿತ್ತು ಎಂದರು.

# ಎನ್‌ಇಪಿ ರದ್ದು ನಿರ್ಧಾರ ಖಂಡಿಸಿ ಪ್ರತಿಭಟನೆ

» ಚಿತ್ರದುರ್ಗ

ಎನ್.ಇ.ಪಿ.ಯನ್ನು ರದ್ದು ಮಾಡುವ ರಾಜ್ಯ ಸರ್ಕಾರದ ನಿರ್ಧಾರವನ್ನು ಖಂಡಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ರಾಜ್ಯ ಸರ್ಕಾರವನ್ನು ಈ ಪ್ರತಿಭಟನೆಯ ಮೂಲಕ ಆಗ್ರಹಿಸುತ್ತದೆ.

ಕರ್ನಾಟಕದ ಪ್ರಸಕ್ತ ರಾಜ್ಯ ಸರ್ಕಾರವು ರಾಜಕೀಯ ಪ್ರೇರಿತ ಸಂಕುಚಿತತೆಗಳಿಗೆ ಒಳಗಾಗದೆ, ಶಿಕ್ಷಣವನ್ನು ರಾಜಕೀಯ ಸ್ವಾರ್ಥಸಾಧನೆಯ ವಸ್ತುವಾಗಿಸದೆ, ಈಗಿನ ಎನ್.ಇ.ಪಿ. ಯನ್ನು ಅದರ ಗುಣಾಧಾರದಲ್ಲಿ ವಿರುದ್ಧ ಶೈಕ್ಷಣಿಕ ದೃಷ್ಟಿಯಿಂದ ಪರಾಮರ್ಶನ ನಡೆಸಬೇಕೆಂದು, ಅದರಲ್ಲಿ ವಾಸ್ತವಿಕವಾಗಿಯೂ ಸಣ್ಣ-ಪುಟ್ಟ ಕೊರತೆಗಳು ಹಾಗೂ ದೋಷಗಳು ಕಂಡು ಬಂದಲ್ಲಿ ಅವುಗಳನ್ನು ವಿದ್ಯಾರ್ಥಿಗಳ ಹಿತದ ಹಿನ್ನಲೆಯಲ್ಲಿ ಸರಿಪಡಿಸಿಕೊಂಡು ಎನ್.ಇ.ಪಿ. ವಿರೋಧದ ತನ್ನ ನಿಲುವನ್ನು ಕೈಬಿಡಬೇಕೆಂದು ಆಗ್ರಹಿಸುತ್ತದೆ.

ಇಡೀ ದೇಶದಲ್ಲಿ ನಮ್ಮ ಕರ್ನಾಟಕವು, ಅದನ್ನು ಮೊದಲ ಬಾರಿಗೆ 2020-2021 ರಲ್ಲಿ ಜಾರಿಗೊಳಿಸಿದ ರಾಜ್ಯವಾಗಿದೆ ಎಂಬ ಹೆಮ್ಮೆಗೂ ಪಾತ್ರವಾಗಿದೆ. ಇಂತಹ ಶಿಕ್ಷಣ ನೀತಿಯನ್ನು ಆದು ಜಾರಿಗೊಳ್ಳುತ್ತಿರುವ ಹಂತದಲ್ಲಿಯೇ ರದ್ದುಗೊಳಿಸಲು ಹೊರಟಿರುವ ಪ್ರಸಕ್ತ ಕರ್ನಾಟಕ ರಾಜ್ಯ ಸರ್ಕಾರದ ನಿರ್ಧಾರ ಶಿಕ್ಷಣ ವಿರೋಧಿಯಾದದು, ಪ್ರವರ್ಾಗ್ರಹ ಪೀಡಿತವಾದುದು, ರಾಜಕೀಯ



ಪ್ರೇರಿತವಾದುದು, ರಾಜ್ಯದ ವಿದ್ಯಾರ್ಥಿಗಳ ಹಿತಕ್ಕೆ ಮಾದಕವಾದದು, ತಾರ್ಕಿಕವಾಗಿರದೆ ವಿವೇಚನಾರಹಿತವಾದುದು, ಆದ್ದರಿಂದಲೆ ಖಂಡನೀಯವಾಗಿದೆ.

ಓಇಕ ಯನ್ನು ಕೇಂದ್ರ ಸರ್ಕಾರ ಕೇವಲ ತನ್ನ ಮರ್ಜಿಯಂತೆ ರೂಪಿಸಿದ್ದಲ್ಲ, ದೇಶಾದ್ಯಂತ ಶಿಕ್ಷಣ ತಂದು ವಿವಿಧ ಸ್ಥರಗಳಲ್ಲಿ ಶಿಕ್ಷಣ ರಂಗದ ಎಲ್ಲಾ ಬಾಧ್ಯಸ್ಥರ ಜೊತೆಗೆ ನಿರಂತರ ಸಂವಹನ ಮಾಹಿತಿ ವಿನಿಮಯ - ಚರ್ಚೆ ನಡೆಸಿ ತಯಾರಿಸಿದ ಕರಡಿನ ಆಧಾರದಲ್ಲಿ ಈ ನೀತಿಯನ್ನು ರೂಪಿಸಿರುವುದಾಗಿದೆ. ಈಗಿನ ಎನ್‌ಇಪಿಯು ಮೊದಲ ಬಾರಿಗೆ ವಿದ್ಯಾರ್ಥಿ ಕೇಂದ್ರೀತವಾಗಿದ್ದು ಬಹು ಶಿಸ್ತೀಯ ಅಧ್ಯಯನಕ್ಕೆ, ಕೌಶಲ್ಯಾಧಾರಿತ ಶಿಕ್ಷಣಕ್ಕೆ, ಭಾರತದ ಬಹುಭಾಷಿಕ ಹಾಗೂ ಸಾಂಸ್ಕೃತಿಕ ಬಹುತ್ವಕ್ಕೆ. ಪ್ರಾಂತೀಯ-ಸ್ಥಳೀಯ ಭಾಗ್ಯಗಳ ಅಭಿವೃದ್ಧಿಗೆ ಸೂಕ್ತ ಮಾನ್ಯತೆ ಹಾಗೂ ಪ್ರಾಮುಖ್ಯ ನೀಡಿ ರೂಪಿಸಿರುವಂತಹದಾಗಿದೆ.

ಎನ್.ಇ.ಪಿ.ಬಗೆಗಿನ ವಿರೋಧ ಏತಕ್ಕಾಗಿ? ಯಾವ ಶೈಕ್ಷಣಿಕ ಹಾಗೂ ತರ್ಕಬದ್ಧ ಕಾರಣಗಳಿಗಾಗಿ-? ಈಗ ಜಾರಿಯಲ್ಲಿರುವ ಓಇಕಯ ಬಗ್ಗೆ, ಅದರ ಸಾಧಕ-ಭಾದಕಗಳ ಬಗ್ಗೆ ಸೂಕ್ತ ವೇದಿಕೆಗಳಲ್ಲಿ ಚರ್ಚಿಸದೆ, ಆ ಕುರಿತು ಶಿಕ್ಷಣ ತಜ್ಞರ ಸೆಮಿನಾರ್ ನಡೆಸಿ ಅಭಿಪ್ರಾಯ ಸಂಗ್ರಹಿಸುವ ಪ್ರಯತ್ನ ಮಾಡದೆ ಅದರ ರದ್ದತಿಯ ಘೋಷಣೆ ಆದೆಷ್ಟು ಸರಿ.

ಎನ್.ಇ.ಪಿ.ಯ ರದ್ದತಿ ರಾಜಕೀಯ ಸೇಡುತೀರಿಸುತ್ತಿರುವ ಅಸ್ತ್ರವಾಗಿದೆಯೇ ? ಹಾಗಿಲ್ಲವಾದಲ್ಲಿ ಅದನ್ನು ರದ್ದುಗೊಳಿಸುವ ತಿರ್ಮಾನವನ್ನು ಮೊದಲೇ ಪ್ರಕಟಿಸಿ ಆನಂತರ ರಾಜ್ಯದ ಉಪಕುಲಪತಿಗಳ ಸಭೆ ಕರೆದು ಅಭಿಪ್ರಾಯ ಕೇಳುವುದು 'ಚುನಾವಣಾ ಪ್ರಣಾಳಿಕೆಯಲ್ಲಿಯೇ ಓಇಕ ರದ್ದತಿ ಬಗ್ಗೆ ಹೇಳಿದ್ದೇವೆ ಎನ್ನುವವರು ಯಾವ ಯಾವ ಶಿಕ್ಷಣ ತಜ್ಞರ ಸಭೆಯಲ್ಲಿ ಈ ಕುರಿತು ಚರ್ಚಿಸಿ ತೀರ್ಮಾನ ಕೈಗೊಂಡಿರುವಿರ?

ಓಇಕ ಆಧಾರದ ಶಿಕ್ಷಣದಲ್ಲಿ, ಐ.ಐ.ಟಿ, ಐ.ಐ.ಎಂ, ಐ.ಐ.ಎಸ್ ಸಿ, ಕೇಂದ್ರೀಯ ವಿ.ವಿಗಳು ಇಂತಹ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಗಳಲ್ಲಿ ದೇಶದ ಎಲ್ಲೆಡೆಯ ವಿದ್ಯಾರ್ಥಿಗಳಿಗೆ ಮುಂಬರುವ ದಿನಗಳಲ್ಲಿ, ಶಿಕ್ಷಣ ದೊರೆಯಲಾರಂಭಿಸಿದಾಗ ಕರ್ನಾಟಕದ ವಿದ್ಯಾರ್ಥಿಗಳು ಎಲ್ಲಿ ಹೋಗಬೇಕು ಏನು ಮಾಡಬೇಕು? ಅವರ ಸ್ಥಿತಿ ತ್ರಿಶಂಕುವಿನ ಸ್ಥಿತಿಯೇ? ಎನ್‌ಇಪಿ ರದ್ದತಿಯ ನಿಲುವು ಕರ್ನಾಟಕದ ವಿದ್ಯಾರ್ಥಿಗಳ ಭವಿಷ್ಯವನ್ನು ಕತ್ತಲೆಗೆ ದುಡುವುದಿಲ್ಲವೇ? ಎಲ್ಲಕ್ಕಿಂತ ಮುಖ್ಯವಾಗಿ, ಓಇಕ ಯನ್ನು ರದ್ದುಗೊಳಿಸುವನೆಂದು ಹೇಳಿಕೊಳ್ಳುತ್ತಿರುವವರು ಅದನ್ನು ರೂಪಿಸಿದವರ? ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಜೊತೆಯಲ್ಲಿ ಚರ್ಚಿಸಿ - ನಂತರ ತಿರ್ಮಾನಿಸುವ ಸವಾಲನ್ನೇಕೆ ಸ್ವೀಕರಿಸುತ್ತಿಲ್ಲ? ಎಂದು ಪ್ರಶ್ನಿಸಲಾಯಿತು.

ಪ್ರಾಂತ ಸಂಘಟನಾ ಕಾರ್ಯದರ್ಶಿ ಬಸವೇಶ್‌ಕೋರಿ ಮಾತನಾಡಿದರು, ವಿಭಾಗ ಸಂಘಟನಾ ಕಾರ್ಯದರ್ಶಿ ಮಂಜುನಾಥ, ಪ್ರಾಂತ ಕಾರ್ಯಸಮಿತಿ ಆದರ್ಶ್, ಜಿಲ್ಲಾ ಸಂಚಾಲಕ ಸಿದ್ದೇಶ್, ಕನಕರಾಜ್, ಮನೋಜ್, ಭರತ್ ಇನ್ನು ಮುಂತಾದವರು ಉಪಸ್ಥಿತರಿದ್ದರು.

# ಬೆಳಕು ಕಿವುಡ-ಮೂಗರ ಶಾಲೆಯಲ್ಲಿ ರಾಜ್ಯಸಭಾ ಸದಸ್ಯ ಡಾ.ನಾಸೀರ್ ಹುಸೇನ್ ಹುಟ್ಟುಹಬ್ಬ

» ಚಳ್ಳಕೆರೆ

ಕಳೆದ ಹಲವಾರು ವರ್ಷಗಳಿಂದ ರಾಜ್ಯಸಭಾ ಸದಸ್ಯರಾಗಿ ಕಾರ್ಯನಿರ್ವಹಿಸುತ್ತಿರುವ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಡಾ.ನಾಸೀರ್ ಹುಸೇನ್‌ರವರ ಹುಟ್ಟುಹಬ್ಬ ಹಿನ್ನೆಲೆಯಲ್ಲಿ ಅವರ ಅಭಿಮಾನಿಗಳು ನಗರದ ಬೆಳಕು ಕಿವುಡ, ಮೂಗರ ಶಾಲೆಯ ಮಕ್ಕಳಿಗೆ ಸಿಹಿ ಹಂಚುವ ಮೂಲಕ ಹುಟ್ಟುಹಬ್ಬವನ್ನು ಸರಳವಾಗಿ ಆಚರಿಸಿದರು.

ಕಾಂಗ್ರೆಸ್ ಪಕ್ಷದ ಜಿಲ್ಲಾ ಅಲ್ಪಸಂಖ್ಯಾತ ಘಟಕದ ಅಧ್ಯಕ್ಷ ಅಬ್ದುಲ್ ಶಾವಲಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಕಿವುಡು ಮೂಗರ ಶಾಲೆಯಲ್ಲಿ ಈ ಕಾರ್ಯಕ್ರಮ ಆಯೋಜಿಸಿರುವುದು ಸಂತಸ ತಂದಿದೆ. ಈ ಬಗ್ಗೆ ರಾಜ್ಯ ಸಭಾ ಸದಸ್ಯರಿಗೆ ಮಾಹಿತಿ ನೀಡಿದಾಗ ಸಂತೋಷಪಟ್ಟರು. ಹುಟ್ಟುಹಬ್ಬವನ್ನು ಬೆಳಕನ್ನು ಕಾಣದ ಮಕ್ಕಳೊಂದಿಗೆ ಆಚರಿಸುವ ವಿಭಿನ್ನ ಸಂಪ್ರದಾಯವನ್ನು ಕೈಗೊಂಡಿದ್ದೇವೆ. ಮುಂದಿನ ದಿನಗಳಲ್ಲಿ ಈ ಶಾಲೆಯ ಮಕ್ಕಳ ಹಿತಕಾಯುವಲ್ಲಿ ನಾವು ಮುಂದಾಗುತ್ತೇವೆ ಎಂದರು.

ಕೆಪಿಸಿಸಿ ಅಲ್ಪಸಂಖ್ಯಾತ ಘಟಕದ



ರಾಜ್ಯ ಸಂಘಟನಾ ಕಾರ್ಯದರ್ಶಿ ಬಿ.ಫರೀದ್‌ಖಾನ್(ಭಾಷ) ಮಾತನಾಡಿ, ಕಳೆದ ಹಲವಾರು ವರ್ಷಗಳಿಂದ ಈ ಶಾಲೆಯ ಮಕ್ಕಳ ಶೈಕ್ಷಣಿಕ ಹಾಗೂ ಇನ್ನಿತರೆ ಸೌಲಭ್ಯ ಒದಗಿಸಲು ಸಾಕಷ್ಟು ಪ್ರಯತ್ನ ನಡೆಸಲಾಗುತ್ತಿದೆ. ಕಳೆದ ವರ್ಷವೂ ಸಹ ಮಕ್ಕಳಿಗೆ ಉಚಿತವಾಗಿ ನೋಟ್‌ಪುಸ್ತಕ, ಪೆನ್ನು, ಪುಸ್ತಕಗಳನ್ನು ವಿತರಿಸಲಾಯಿತು. ಸೌಲಭ್ಯದ ಕೊರತೆಯಿಂದ ಇಲ್ಲಿನ ಮಕ್ಕಳು ವಂಚಿತರಾಗದಂತೆ ಜಾಗ್ರತೆ ವಹಿಸಲಾಗುವುದು. ಅಲ್ಪಸಂಖ್ಯಾತ ಘಟಕದ ಮುಖಂಡ ಶಫಿ ನಾಶಿಪುಡಿ, ಈ ಶಾಲೆಯ ಮಕ್ಕಳಿಗೆ ಪ್ರತಿವರ್ಷ ಆರ್ಥಿಕ ನೆರವು ನೀಡುವ ಭರವಸೆ ನೀಡಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಅಲ್ಪಸಂಖ್ಯಾತ ಘಟಕದ ಅಧ್ಯಕ್ಷ ಡಿ.ಕೆ.ಅನ್ವರ್‌ಸಾಬ್, ಚಾಂದ್‌ಪೀರ್, ಮೆಹಬೂಬ್ ರೆಹಮಾನ್, ಇಮ್ರಾನ್, ನಯಾಜ್, ಸಮೀರ್‌ಪಿಂಟೋ, ಇಂತಿಯಾಜ್, ನಿಜಾಂ ಉಪಸ್ಥಿತರಿದ್ದರು

### ಚಳ್ಳಕೆರೆ ಠಾಣೆಗೆ ಭೇಟಿ ನೀಡಿದ ಎಸ್ಪಿ ಧರ್ಮೇಂದ್ರ ಕುಮಾರ್ ಮೀನಾ



» ಚಳ್ಳಕೆರೆ

ಜಿಲ್ಲೆಯ ನೂತನ ಜಿಲ್ಲಾ ರಕ್ಷಣಾಧಿಕಾರಿಯಾಗಿ ಕರ್ತವ್ಯಕ್ಕೆ ಹಾಜರಾಧ ರಕ್ಷಣಾಧಿಕಾರಿ ಧರ್ಮೇಂದ್ರಕುಮಾರ್ ಮೀನಾ ಭಾನುವಾರ ಮಧ್ಯಾಹ್ನ ಚಳ್ಳಕೆರೆ ಪೊಲೀಸ್ ಠಾಣೆಗೆ ಭೇಟಿ ನೀಡಿದ್ದರು. ಈ ಸಂದರ್ಭದಲ್ಲಿ ಪೊಲೀಸ್ ಠಾಣೆಯ ಮುಂಭಾಗದಲ್ಲಿರುವ ಹಲವಾರು ವಾಹನಗಳನ್ನು ಪರಿಶೀಲಿಸಿದ ಅವರು ಅನಗತ್ಯವಾಗಿ ಇಷ್ಟು ಪ್ರಮಾಣದ ವಾಹನ ನಿಲುಗಡೆ ಮಾಡಿಕೊಂಡಿರುವುದು ಸರಿಯಲ್ಲವೆಂದು ಅಧಿಕಾರಿಗಳಿಗೆ ತಿಳಿಸಿದರು. ಚಳ್ಳಕೆರೆ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣಗಳ ಬಗ್ಗೆ ಪರಿಶೀಲನೆ ಸಹ ನಡೆಸಿದರು. ದಲಿತ ಸಂಘಟನೆಯ ಮುಖಂಡ ಟಿ.ಭದ್ರಿ ನೂತನ ಎಸ್ಪಿ ಧರ್ಮೇಂದ್ರಕುಮಾರ್ ಮೀನಾರವರಿಗೆ ಸಸಿ ನೀಡುವ ಮೂಲಕ ಸ್ವಾಗತಿಸಿ ಶುಭ ಹಾರೈಸಿದರು. ಡಿವೈಎಸ್ಪಿ ರಾಜಣ್ಣ, ಇನ್ಸ್‌ಪೆಕ್ಟರ್ ಆರ್.ಎಫ್ ದೇಸಾಯಿ, ಪಿಎಸ್‌ಐಗಳಾದ ಕೆ.ಸತೀಶ್‌ನಾಯ್ಕ, ಶಿವರಾಜ, ಧರೆಪ್ಪಬಾಳಪ್ಪ ದೊಡ್ಡಮನಿ ಮುಂತಾದವರು ಉಪಸ್ಥಿತರಿದ್ದರು.

# ಸೆ.3 ರಂದು ಶಿಕ್ಷಕರ ಅರ್ಹತಾ ಪರೀಕ್ಷೆ: ಪರೀಕ್ಷಾ ಕೇಂದ್ರಗಳಲ್ಲಿನ ಸೌಕರ್ಯಗಳ ಬಗ್ಗೆ ಗಮನ ಹರಿಸಿ

» ಚಿತ್ರದುರ್ಗ

2023ರ ಸೆಪ್ಟೆಂಬರ್ 3ರಂದು ಶಿಕಕರ ಅರ್ಹತಾ ಪರೀಕ್ಷೆ ನಡೆಯಲಿದ್ದು, ಅಧಿಕಾರಿಗಳು ಪರೀಕ್ಷಾ ಕೇಂದ್ರಗಳಲ್ಲಿನ ಮೂಲಭೂತ ಸೌಕರ್ಯಗಳ ಬಗ್ಗೆ ಗಮನ ಹರಿಸಬೇಕು. ಯಾವುದೇ ಲೋಪದೋಷಗಳು ಆಗದಂತೆ ಎಚ್ಚರಿಕೆಯಿಂದ ಪರೀಕ್ಷಾ ಕಾರ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಹೇಳಿದರು.ಈ ಕುರಿತು ಸೋಮವಾರ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜರುಗಿದ ಪರೀಕ್ಷಾ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಎರಡು ಅಧಿವೇಶನಗಳಲ್ಲಿ ಪರೀಕ್ಷೆ ನಡೆಯಲಿದೆ. ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳ ಗುರುತಿನ ಚೀಟಿ ಪರಿಶೀಲಿಸುವುದು ಕಡ್ಡಾಯಗೊಳಿಸಿ. ಪರೀಕ್ಷಾ ಕೇಂದ್ರ ಪ್ರವೇಶಕ್ಕೂ ಮುನ್ನಾ ಅಭ್ಯರ್ಥಿಗಳನ್ನು ಸಂಪೂರ್ಣವಾಗಿ



ತಪಾಸಣೆ ನಡೆಸಲು ಕ್ರಮಕೈಗೊಳ್ಳಬೇಕು. ಪರೀಕ್ಷಾ ಕಾರ್ಯಕ್ಕೆ ನಿಯೋಜಿಸಿದ ಅಧಿಕಾರಿಗಳನ್ನು ಹೊರತುಪಡಿಸಿ ಯಾವುದೇ ವ್ಯಕ್ತಿಗಳಿಗೆ ಪರೀಕ್ಷಾ ಕೇಂದ್ರಕ್ಕೆ ಪ್ರವೇಶ ನೀಡುವಂತಿಲ್ಲ. ಪ್ರಶ್ನೆ ಪತ್ರಿಕೆ ಹಾಗೂ ಓಎಂಆರ್ ಬಂಡಲ್‌ಗಳನ್ನು ಜಿಲ್ಲಾ ಖಜಾನೆಯಲ್ಲಿ ಸಂರಕ್ಷಿಸಿ ಇಡಬೇಕು. ಮೊದಲ ಅವಧಿಯ ಪರೀಕ್ಷೆಗೆ ಬೆಳಿಗ್ಗೆ 7. 30ಕ್ಕೆ ಹಾಗೂ ಅಪರಾಹ್ನ ಪರೀಕ್ಷೆಗೆ ಮಧ್ಯಾಹ್ನ 12.30 ಕ್ಕೆ ಮಾರ್ಗಾಧಿಕಾರಿಗಳಿಗೆ ವಿತರಿಸಿ, ನಿಗದಿತ ಸಮಯದಲ್ಲಿ ಪರೀಕ್ಷಾ ಕೇಂದ್ರಗಳನ್ನು ತಲುಪುವಂತೆ ನೋಡಿಕೊಳ್ಳಬೇಕು. ಪ್ರತಿ ಪರೀಕ್ಷಾ ಕೇಂದ್ರಕ್ಕೆ ಹಾಗೂ ಮಾರ್ಗಾಧಿಕಾರಿಗಳಿಗೂ ಸೂಕ್ತ ಪೊಲೀಸ್ ಬಂದೋಬಸ್ತ್ ನೀಡಬೇಕು. ಪರೀಕ್ಷೆ ಕುರಿತು ಪತ್ರಿಕಾ ಮಾಧ್ಯಮದಲ್ಲಿ ಅಗತ್ಯ ಅಂಶಗಳ ಕುರಿತು ಪ್ರಚಾರ ನೀಡಬೇಕು. ಪ್ರತಿ ಪರೀಕ್ಷಾ ಕೇಂದ್ರದಲ್ಲೂ ಆರೋಗ್ಯ ಸಹಾಯಕರನ್ನು ನೇಮಿಸಿಕೊಳ್ಳಲು ಅಧಿಕಾರಿಗಳಿಗೆ ಕ್ರಮಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಮೊದಲ ಅಧಿವೇಶನದ ಪರೀಕ್ಷೆ 20 ಕೇಂದ್ರಗಳಲ್ಲಿ ನಡೆಯಲಿದ್ದು, ಒಟ್ಟು 5766 ಅಭ್ಯರ್ಥಿಗಳು ಪರೀಕ್ಷೆ ಬರೆಯುವರು. ಎರಡನೇ ಅಧಿವೇಶದ ಪರೀಕ್ಷೆ 30 ಕೇಂದ್ರಗಳಲ್ಲಿ ನಡೆಯಲಿದ್ದು, 8009 ಅಭ್ಯರ್ಥಿಗಳು ಪರೀಕ್ಷೆ ಬರೆಯುವರು. ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀಟರ್ ಪ್ರದೇಶದಲ್ಲಿ ನಿಷೇಧಿತ ಎಂದು ಆದೇಶ ಮಾಡಬೇಕಿದೆ. ಮೊದಲ ಅಧಿವೇಶನಕ್ಕೆ 10 ಹಾಗೂ ಎರಡನೇ ಅಧಿವೇಶನಕ್ಕೆ 15 ಮಾರ್ಗಾಧಿಕಾರಿಗಳನ್ನು ನೇಮಕ ಮಾಡಲಾಗಿದೆ.

## ಪ್ರಮುಖ ಸುದ್ದಿ

# ಕವಾಡಿಗರಹಟ್ಟಿ : ನೀರು ಶುದ್ದೀಕರಣ ಯಂತ್ರ ವಿತರಣೆ

» ಚಿತ್ರದುರ್ಗ

ನಮ್ಮ ಜಿ.ಎಸ್.ಎಸ್. ಮೈಕ್ರೋ ಫೈನಾನ್ಸ್ ಲಿಮಿಟೆಡ್ ಜನತೆಗೆ ಬರೀ ಸಾಲವನ್ನು ನೀಡುವುದು ಮಾತ್ರವಲ್ಲದೆ ಸಮಾಜಮುಖಿಯಾದ ಕೆಲಸವನ್ನು ಮಾಡುವುದ್ದಲ್ಲದೆ ಸ್ತ್ರೀಯರ ಸಬಲಿಕರಣಕ್ಕೆ ಒತ್ತು ನೀಡಲಾಗಿದೆ ಎಂದು ಸಂಸ್ಥೆಯ ರಾಜ್ಯ ಮುಖ್ಯಸ್ಥರಾದ ರಘು ತಿಳಿಸಿದರು.

ಚಿತ್ರದುರ್ಗ ನಗರದ ರೈಲ್ವೆ ನಿಲ್ದಾಣದ ಬಳಿಯ ಜಿ.ಎಸ್.ಎಸ್. ಮೈಕ್ರೋ ಫೈನಾನ್ಸ್ ಲಿಮಿಟೆಡ್‌ನ ಚಿತ್ರದುರ್ಗ ಶಾಖೆಯಲ್ಲಿ ಸಿಎಸ್.ಆರ್ ಯೋಜನೆಯಡಿ ಹಮ್ಮಿಕೊಂಡಿದ್ದ ನಗರದ ಕವಾಡಿಗರಹಟ್ಟಿಯಲ್ಲಿ ಕಲುಷಿತ ನೀರು ಸೇವಿಸಿ ಸಮಸ್ಯೆಯಿಂದ ಬಳಲುತ್ತಿರುವ 200 ಕುಟುಂಬಗಳಿಗೆ ತಲಾ 2700 ರೂ. ವೆಚ್ಚದಲ್ಲಿ ಉಚಿತವಾಗಿ ನೀರು ಶುದ್ದೀಕರಣ ಯಂತ್ರ ವಿತರಣಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಕಳೆದ 15 ವರ್ಷದಿಂದ ನಮ್ಮ ಕಂಪನಿಯು ಈ ರೀತಿಯಾದ ವಿವಿಧ ರೀತಿಯ ಸಮಾಜ ಮುಖಿಯಾದ ಕಾರ್ಯಕ್ರಮವನ್ನು ಮಾಡುತ್ತಾ ಬಂದಿದೆ. ನಮ್ಮ ಸಂಸ್ಥೆಯಲ್ಲಿ ಆರೋಗ್ಯ,ಶಿಕ್ಷಣ ಮತ್ತು ಮಹಿಳಾ ಸಬಲೀಕರಣಕ್ಕೆ ಒತ್ತು ನೀಡಲಾಗಿದೆ. ಗ್ರಾಮಾಂತರ ಪ್ರದೇಶದಲ್ಲಿ



ದುಸ್ಥಿತಿಯಲ್ಲಿರುವ ಸರ್ಕಾರಿ ಶಾಲೆಗಳನ್ನು ಗುರುತಿಸಿ ಅವುಗಳನ್ನು ಸರಿಪಡಿಸುವ ಕಾರ್ಯವನ್ನು ಮಾಡಲಾಗುತ್ತದೆ, ಅಗತ್ಯವಿದ್ದ ಕಡೆಯಲ್ಲಿ ಶೌಚಾಲಯ ನಿರ್ಮಾಣ ಮಾಡಿಕೊಡಲಾಗಿದೆ ಮತ್ತೇ ಕೆಲವಡೆಗಳಲ್ಲಿ ಮಕ್ಕಳಿಗಾಗಿ ಶುದ್ದ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಿ ಕೂಡಲಾಗಿದೆ. ಇದರೊಂದಿಗೆ ಮಕ್ಕಳಿಗಾಗಿ ಬ್ಯಾಗ್, ಡೆಸ್ಕ್, ಬೆಂಚು, ಚೇರ್‌ಗಳನ್ನು ನೀಡಲಾಗಿದೆ. ಇದ್ದಲ್ಲದೆ ವಿಡಿಯೂ ಕಾನ್‌ಫೇರಸ್ಸ್ ಶಾಲೆಗಳನ್ನು ನಿರ್ಮಾಣ ಮಾಡಿ ಕೂಡಲಾಗಿದೆ ಎಂದರು.

ನಮ್ಮ ಸಂಸ್ಥೆಯೂ ಬರೀ ಸಾಲವನ್ನು ನೀಡುವುದು ಮಾತ್ರವಲ್ಲದೆ ಜನಪಯೋಗಿ ಕಾರ್ಯವನ್ನು ಸಹಾ ತನ್ನ ಲಾಭಾಂಶದಲ್ಲಿ ನಿರ್ಮಾಣ ಮಾಡಿಕೊಡಲಾಗುತ್ತದೆ. ಬಡ ಕುಟುಂಬಗಳಿಗೆ ಸಂಸ್ಥೆಯು ವಿವಿಧ ರೀತಿಯ ನೆರವನ್ನು ನೀಡಲಾಗುತ್ತಿದೆ. ನಮ್ಮಿಂದ ಪಡೆದ ಸಾಲವನ್ನು ಸರಿಯಾದ ರೀತಿಯಲ್ಲಿ ಸದುಪಯೋಗ ಪಡೆದುಕೊಳ್ಳಿ, ವಿನಾಕಾರಣ ಹೆಚ್ಚಿನ ರೀತಿಯಲ್ಲಿ ಸಾಲವನ್ನು ಪಡೆದು ಅರ್ಥಿಕ ಹೊರೆಯನ್ನು ಮಾಡಿಕೊಳ್ಳಬೇಡಿರೆಂದು ಕರೆ ನೀಡಿ ನಮ್ಮಲ್ಲಿ 5000 ಜನ ಸದಸ್ಯರಿದ್ದು, 10,000 ಕುಟುಂಬಗಳಿಗೆಆರ್ಥಿಕವಾಗಿ,ಶೈಕ್ಷಣಿಕವಾಗಿ ಮತ್ತು ಸಾಮಾಜಿಕವಾಗಿ ನೆರವನ್ನು ನೀಡಲಾಗುತ್ತಿದೆ. ವಿವಿಧೆಡೆಗಳಲ್ಲಿ ಆರೋಗ್ಯ ಶಿಬಿರಗಳನ್ನು ಹಮ್ಮಿಕೊಳ್ಳುವುದರ ಮೂಲಕ ಜನತೆ ಮತ್ತು ಪಶುಗಳ ಆರೋಗ್ಯದ ಕಡೆಗೆ ಗಮನೀಡಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಸಿ.ಎಸ್.ಆರ್‌ನ ಮನೋಜ್ ಮಾತನಾಡಿ, ಇಂದಿನ ದಿನದಲ್ಲಿ ಮಹಿಳೆಯರು ಮನಗೆಲಸದಲ್ಲಿ ತೂಡಗಿ ತಮ್ಮ ಆರೋಗ್ಯದ ಬಗ್ಗೆ ಗಮನ ನೀಡುತ್ತಿಲ್ಲ, ಸಮಯಕ್ಕೆ ಸರಿಯಾಗಿ ಊಟವನ್ನು ಮಾಡುತ್ತಿಲ್ಲ, ನಾವು ಸೇವನೆ ಮಾಡುವ ಗಾಳಿ, ಶುದ್ದವಾದ ಕುಡಿಯುವ ನೀರು ಚನ್ನಾಗಿ ಇದ್ದಲ್ಲಿ ಉತ್ತಮವಾದ ಆರೋಗ್ಯವನ್ನು ಪಡೆಯಲು ಸಾಧ್ಯವಿದೆ. ಈ ಹಿಂದೆ ನಮ್ಮ ಹಿರಿಯರು ಉತ್ತಮವಾದ ಕೆಲಸ, ಶುದ್ದವಾದ ಗಾಳಿ, ನೀರನ್ನು ಸೇವನೆ ಮಾಡುತ್ತಿದ್ದ ಹಿನ್ನಲೆಯಲ್ಲಿ ಆವರ ಅಯಸ್ಸು ಹೆಚ್ಚಾಗಿತ್ತು ಆದರೆ ಇಂದಿನ ಕಲಬೆರಕೆಯಲ್ಲಿ ನಮ್ಮಗಳ ಆಯಸ್ಸು ದಿನದಿಂದ ಕಡಿಮೆಯಾಗುತ್ತಿದೆ. ಆರೋಗ್ಯವು ಸಹಾ ಹದಗೆಡುತ್ತಿದೆ ಎಂದರು.

ಮತ್ತೋರ್ವ ಸಿ.ಎಸ್.ಆರ್‌ನ ಪ್ರಶಾಂತ್ ಮಾತನಾಡಿ, ಕವಾಡಿಗರ ಹಟ್ಟಿಯಲ್ಲಿ ಕುಡಿಯುವ ನೀರಿನಿಂದ ವಿವಿಧ ರೀತಿಯ ಅನಾಹುತವಾಗಿದ್ದು, ಇದನ್ನು ಮನಗಂಡ ನಮ್ಮ ಸಂಸ್ಥೆಯು ಆಲ್ಲಿನ ಜನರಿಗೆ ಶುದ್ದವಾದ ಕುಡಿಯುವ ನೀರಿನ ಘಟಕಗಳನ್ನು ನೀಡಲು ತೀರ್ಮಾನ ಮಾಡಿ ಕಡಿಮೆ ದರದಲ್ಲಿ ಉಚಿತವಾಗಿ ನೀಡಲಾಗುತ್ತಿದೆ. ಇದನ್ನು ಸರಿಯಾದ ರೀತಿಯಲ್ಲಿ ಸುರಕ್ಷತೆಯಿಂದ ಇಟ್ಟುಕೊಂಡಲ್ಲಿ ವರ್ಷ ಪೂರ್ತಿಯಾಗಿ ಬಾಳಿಕೆ ಬರುತ್ತದೆ ಅರು ತಿಂಗಳಿಗೊಮ್ಮೆ ಕ್ಯಾಡಲ್‌ನ್ನು ಬದಲಾಯಿಸಿದರೆ ಸಾಕು ಎಂದು ತಿಳಿಸಿದರು.

ಕಾರ್ಯಕ್ರಮವನ್ನು ಹಿರಿಯ ಪತ್ರಕರ್ತರಾದ ಗೂಂಡಬಾಳ್ ಬಸವರಾಜು ಉದ್ಘಾಟಿಸಿದರು. ಏರಿಯ ವ್ಯವಸ್ಥಾಪಕರಾಧ ಶಿವಲಿಂಗಶೆಟ್ಟಿ, ಹಿರಿಯ ವ್ಯವಸ್ಥಾಪಕರಾದ ಯಲ್ಲಪ್ಪ, ಗಿರಿಧರ್, ಚಿತ್ರದುರ್ಗ ಶಾಖೆಯ ವ್ಯವಸ್ಥಾಪಕರಾದ ಮಂಜುನಾಥ್ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಅಜಯ್ ಹಿಲೋರಿಗೆ ಡಿಐಜಿಪಿಯಾಗಿ ಬಡ್ತಿ

ಪಿಎಸ್ ಅಧಿಕಾರಿ ಅಜಯ್ ಹಿಲೋರಿಗೆ ಡಿಐಜಿಪಿ ಆಗಿ ಭಡ್ತಿ ನೀಡಲಾಗಿದೆ. ಈಶಾನ್ಯ ವಲಯ, ಕಲ್ಬುರ್ಗಿ ಆಯಉಕಯಾಗಿ ಅಜಯ್ ಹಿಲೋರಿ ವರ್ಗಾವಣೆ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.


### ಮುಂದಿನ ಬಾರಿಯೂ ಕೇಂದ್ರದಲ್ಲಿ ನಾವೇ ಅಧಿಕಾರಕ್ಕೆ ಬರುತ್ತೇವೆ -ಪ್ರಹ್ಲಾದ್ ಜೋಶಿ

ಮುಂದಿನ ಬಾರಿಯೂ ಕೇಂದ್ರದಲ್ಲಿ ನಾವೇ ಅಧಿಕಾರಕ್ಕೆ ಬರುತ್ತೇವೆ. ಮೋದಿ ನೇತೃತ್ವದಲ್ಲಿ ನಮ್ಮದೇ ಸರ್ಕಾರ ಅಧಿಕಾರಕ್ಕೆ ಬರುತ್ತೆ ಎಂದು ಧಾರವಾಡದಲ್ಲಿ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದರು. ಜನವರಿ–ಫೆಬ್ರವರಿಯಲ್ಲಿ ಎಂಪಿ ಚುನಾವಣೆ ಘೋಷಣೆ ಆಗಲಿದೆ. ಕಲ್ಲಿದ್ದಲಿಗೆ ಸಂಬಂಧಿಸಿದ ಯೋಜನೆಗೆ ಪ್ರಸ್ತಾವನೆ ಕೊಡಿ. ಒಂದು ತಿಂಗಳಲ್ಲಿ ಇಲಾಖೆಯಿಂದ ಅನುದಾನ ನೀಡುತ್ತೇವೆ ಎಂದು ಐಐಟಿ ಘಟಿಕೋತ್ಸವದಲ್ಲಿ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದರು.

### ಮುಂದಿನ 5 ವರ್ಷ ನಿಖಿಲ್‌ರನ್ನು ಚುನಾವಣೆಗೆ ಕರೆತರುವ ಪ್ರಶ್ನೆ ಇಲ್ಲ -ಹೆಚ್‌ಡಿ ಕುಮಾರಸ್ವಾಮಿ

ಮುಂದಿನ 5 ವರ್ಷ ನಿಖಿಲ್‌ರನ್ನು ಚುನಾವಣೆಗೆ ಕರೆತರುವ ಪ್ರಶ್ನೆ ಇಲ್ಲ ಎಂದು ಮಂಡ್ಯದಲ್ಲಿ ಮಾಜಿ ಮುಖ್ಯಮಂತ್ರಿಹೆಚ್.ಡಿ.ಕುಮಾರಸ್ವಾಮಿತಿಳಿಸಿದ್ದಾರೆ. ಕಲಾವಿದನಾಗಿ ಜೀವನ ರೂಪಿಸಿಕೊಳ್ಳುವಂತೆ ನಿಖಿಲ್‌ಗೆ ಹೇಳಿದ್ದೇನೆ. ರಾಜಕೀಯದ ಸಹವಾಸಕ್ಕೆ ಹೋಗದೆ, ಭಗವಂತ ಕೊಟ್ಟ ಕಲೆ ಇದೆ. ನಿಖಿಲ್ ಚುನಾವಣೆಗೆ ಸ್ಪರ್ಧಿಸುವ ಪ್ರಶ್ನೆಯೇ ಇಲ್ಲ. ಈಗಾಗಲೇ 3 ಚಿತ್ರ ನಿರ್ಮಾಣ ಮಾಡಲು ಹಲವು ಸಂಸ್ಥೆಗಳು ಬಂದಿವೆ. ಈಗಾಗಲೇ ನಿಖಿಲ್ ಎರಡು ಬಾರಿ ಚುನಾವಣೆಯಲ್ಲಿ ಸೋತಿದ್ದಾನೆ. ಮಂಡ್ಯ ಲೋಕಸಭೆ ಚುನಾವಣೆಯಲ್ಲೂ ಸ್ಪರ್ಧಿಸಲು ತಯಾರಿರಲಿಲ್ಲ. ಕಾರ್ಯಕರ್ತರು ಹಾಗೂ ಶಾಸಕರ ಒತ್ತಡಕ್ಕೆ ನಿಖಿಲ್ ತಲೆ ಕೊಟ್ಟ. ಸೋಲು, ಗೆಲವು ಸಾಮಾನ್ಯ, ಆ ಬಗ್ಗೆ ಚಿಂತಿಸುವುದಿಲ್ಲ. ಹೆಚ್.ಡಿ.ದೇವೇಗೌಡರು, ನಾನು ಚುನಾವಣೆಯಲ್ಲಿ ಸೋತಿಲ್ವಾ? ಎಂದರು.

### ಯಾವುದೇ ಶಾಸಕರೂ ಪಕ್ಷ ಬಿಟ್ಟು ಹೋಗುವುದಿಲ್ಲ, ಇದೆಲ್ಲಾ ಊಹಾಪೋಹ ಅಷ್ಟೇ: ಹೆಚ್.ಡಿ.ದೇವೇಗೌಡ



ಜೆಡಿಎಸ್‌ನ ಯಾವುದೇ ಶಾಸಕರೂ ಪಕ್ಷ ಬಿಟ್ಟು ಹೋಗುವುದಿಲ್ಲ. ಎಆಖ ಶಾಸಕರು ಪಕ್ಷ ಬಿಡುತ್ತಾರೆನ್ನುವುದು ಊಹಾಪೋಹ ಅಷ್ಟೇ ಎಂದು ಬೆಂಗಳೂರಿನಲ್ಲಿ ಜೆಡಿಎಸ್ ವರಿಷ್ಠ ಹೆಚ್.ಡಿ.ದೇವೇಗೌಡ ಸ್ಪಷ್ಟನೆ ನೀಡಿದ್ದಾರೆ. ಮುಂದಿನ ತಿಂಗಳು 10ನೇ ತಾರೀಖು ಒಂದು ಸಭೆ ಮಾಡುತ್ತೇನೆ. ಸಭೆಗೆ ಎಲ್ಲಾ ಜಿಲ್ಲೆಗಳಿಂದ ಜೆಡಿಎಸ್ ಕಾರ್ಯಕರ್ತರು ಬರುತ್ತಾರೆ. 91ನೇ ವಯಸ್ಸಿನ ನನ್ನನ್ನು ಯಾರೂ ಕೈಬಿಡಬೇಡಿ ಎಂದು ಹೆಚ್.ಡಿ.ದೇವೇಗೌಡ ಮನವಿ ಮಾಡಿದರು.

### ಗೃಹಲಕ್ಷ್ಮೀ'ಗೆ 1.11 ಕೋಟಿ ಮಹಿಳೆಯರಿಂದ ನೋಂದಣಿ

'ಗೃಹಲಕ್ಷ್ಮೀ'ಗೆ ಈವರೆಗೆ 1.11 ಕೋಟಿ ಮಹಿಳೆಯರು ನೋಂದಣಿ ಮಾಡಿಕೊಂಡಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮಾಹಿತಿ ನೀಡಿದ್ದಾರೆ. ಗೃಹಲಕ್ಷ್ಮೀ ಯೋಜನೆಗೆ ನೋಂದಣಿ ಮಾಡಲು ಕೊನೆ ದಿನಾಂಕ ಇಲ್ಲ. ಜನರು ಮತ್ತೆ ಆಶೀರ್ವಾದ ನೀಡಿದರೆ ಯೋಜನೆ ನಿರಂತರವಾಗಿ ಜಾರಿಯಾಗುತ್ತೆ. ಯಾವ ಸರ್ಕಾರ ಬಂದರೂ ಇಂತಹ ಜನಪ್ರಿಯ ಯೋಜನೆ ನಿಲ್ಲಲ್ಲ. 5 ಗ್ಯಾರಂಟಿಗಳಲ್ಲೇ ಗೃಹಲಕ್ಷ್ಮೀ ಯೋಜನೆ ಬಹಳಷ್ಟು ಸದ್ದು ಮಾಡ್ತಿದೆ ಎಂದರು.

### ಕಾಂಗ್ರೆಸ್ ಪಕ್ಷದಿಂದ ನನಗೆ ಯಾವುದೇ ಆಹ್ವಾನ ಬಂದಿಲ್ಲ: ಮುನೇನಕೊಪ್ಪ

ಕಾಂಗ್ರೆಸ್ ಪಕ್ಷದಿಂದ ನನಗೆ ಯಾವುದೇ ಆಹ್ವಾನ ಬಂದಿಲ್ಲ ಎಂದು ಹುಬ್ಬಳ್ಳಿಯಲ್ಲಿ ಮಾಜಿ ಸಚಿವ ಶಂಕರ ಪಾಟೀಲ ಮುನೇನಕೊಪ್ಪ ಸ್ಪಷ್ಟನೆ ನೀಡಿದರು. ನಾನು ಲೋಕಸಭೆ ಚುನಾವಣೆಗೆ ಟಿಕೆಟ್ ಆಕಾಂಕ್ಷಿ ಕೂಡ ಅಲ್ಲ. ಎಐಸಿಸಿ ಅಧ್ಯಕ್ಷ ಖರ್ಗೆ, ಕೆಪಿಸಿಸಿ ಅಧ್ಯಕ್ಷ ಡಿಕೆಯವರು ನನ್ನನ್ನು ಕರೆದಿಲ್ಲ. ಕಾಂಗ್ರೆಸ್ ಎಂಎಲ್‌ಸಿ ಜಗದೀಶ್ ಶೆಟ್ಟರ್ ರಿಂದಲೂ ಆಹ್ವಾನ ಬಂದಿಲ್ಲ. ಕಾಂಗ್ರೆಸ್ ಪಕ್ಷದ ಯಾವುದೇ ನಾಯಕರಿಂದಲೂ ಆಹ್ವಾನ ಬಂದಿಲ್ಲ ಎಂದರು.

# ಗ್ಯಾರಂಟಿ ಯೋಜನೆ ದುರ್ಬಳಕೆಯಾಗದಂತೆ ಪರಿಶೀಲಿಸಿ ಅನುಮೋದಿಸಿ; ಉಸ್ತುವಾರಿ ಕಾರ್ಯದರ್ಶಿ ಗುಂಜನ್ ಕೃಷ್ಣ

» **ದಾವಣಗೆರೆ**

ಸರ್ಕಾರ ಸರ್ವರಿಗೂ ಸಮಪಾಲು, ಸಮಬಾಳು ಮತ್ತು ಜನರಿಗೆ ಅನುಕೂಲ ಕಲ್ಪಿಸಲು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ್ದು ಇವುಗಳ ಅನುಷ್ಠಾನದಲ್ಲಿ ದುರ್ಬಳಕೆಯಾಗದಂತೆ ಪರಿಶೀಲಿಸಿ ಕ್ರಮ ಕೈಗೊಳ್ಳಬೇಕೆಂದು ಕೈಗಾರಿಕಾಭಿವೃದ್ಧಿ ಆಯುಕ್ತರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ನಿರ್ದೇಶಕರು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಗುಂಜನ್ ಕೃಷ್ಣರವರು ಸೂಚನೆ ನೀಡಿದರು.



ಅವರು ಸೋಮವಾರ (ಆ.28) ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್, ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್ ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ನಡೆಸಿದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸರ್ಕಾರದ ಯೋಜನೆಗಳನ್ನು ಬಳಸಿ ಒಂದೇ ಬ್ಯಾಂಕ್ ಖಾತೆಗೆ ಹಲವು ಫಲಾನುಭವಿಗಳ ನೊಂದಣಿಯನ್ನು ಮಾಡಿಸಿ ಹಣ ದುರುಪಯೋಗ ಮಾಡಲಾಗುತ್ತದೆ ಎಂದು ಮಹಾಲೇಖಪಾಲಕರ ವರದಿ ಇದೆ. ಗೃಹಲಕ್ಷ್ಮಿ ಯೋಜನೆಯ ಹಲವು ಫಲಾನುಭವಿಗಳ ಹೆಸರಿಗೆ ಒಂದೇ ಖಾತೆಗೆ ಹಣ ಜಮಾ ಆಗುವಂತೆ ಹ್ಯಾಕ್ ಮಾಡಲಾಗುತ್ತದೆ. ಅದೇ ರೀತಿ ಅನ್ನಭಾಗ್ಯ ಯೋಜನೆಯಡಿ ಐದು ಕೆ.ಜಿ.ಅಕ್ಕಿಯ ಬದಲಾಗಿ ನಗದು ನೀಡಲಾಗುತ್ತಿದ್ದು ಈ ವೇಳೆಯು ದುರುಪಯೋಗ ಆಗುವ ಸಂಭವವಿರುತ್ತದೆ, ಅಧಿಕಾರಿಗಳು ಪ್ರತಿಯೊಂದು ಖಾತೆಯನ್ನು ಪರಿಶೀಲನೆ ನಡೆಸಿ ದುರುಪಯೋಗವಾಗದಂತೆ ಅರ್ಹರಿಗೆ ತಲುಪಿಸುವ ಕೆಲಸ ಮಾಡಬೇಕೆಂದು ಸೂಚನೆ ನೀಡಿದರು.

ಸಮನ್ವಯತೆ; ಜಿಲ್ಲೆ ಉತ್ತಮ ಪ್ರಗತಿಯಲ್ಲಿದೆ, ಆದರೂ ಈ ವರ್ಷ ಬರದ ಛಾಯೆ ಇದ್ದು ಎಲ್ಲರೂ ಸಮನ್ವಯತೆಯಿಂದ ಕೆಲಸ ಮಾಡಬೇಕಾಗಿದೆ. ಸರ್ಕಾರದ ಮಟ್ಟದಲ್ಲಿ ಅಥವಾ ಇಲಾಖೆಗಳಲ್ಲಿ ಯಾವುದಾದರೂ ಸಮಸ್ಯೆಗಳಿದ್ದಲ್ಲಿ ವಿವರವನ್ನು ನನ್ನ ಗಮನಕ್ಕಾಗಲಿ, ಜಿಲ್ಲಾಧಿಕಾರಿಯವರ ಗಮನಕ್ಕಾಗಲಿ ತರಬೇಕು. ಸರ್ಕಾರದಿಂದ ಆಗಬೇಕಾದ ಎಲ್ಲಾ ಕೆಲಸಗಳನ್ನು ಸಮನ್ವಯತೆಯಿಂದ ಮಾಡಲಾಗುತ್ತದೆ ಎಂದು ಎಲ್ಲಾ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರು.

ಶಕ್ತಿ ಯೋಜನೆ; ಮಹಿಳೆಯರು ಸಾರಿಗೆ ನಿಗಮದ ಬಸ್‌ಗಳಲ್ಲಿ ಉಚಿತ ಪ್ರಯಾಣ ಯೋಜನೆಯಡಿ ದಾವಣಗೆರೆ ವಿಭಾಗದಿಂದ ಜೂನ್, ಜುಲೈ, ಆಗಸ್ಟ್ 24 ರ ವರೆಗೆ ಒಟ್ಟು 78,15,550 ಪ್ರಯಾಣಿಕರು ಸಂಚರಿಸಿದ್ದು 19.43 ಕೋಟಿ ನಿಗಮಕ್ಕೆ ಆದಾಯ ಬಂದಿರುತ್ತದೆ ಎಂದು ಕೆ.ಎಸ್.ಆರ್.ಟಿ.ಸಿ. ವಿಭಾಗಾಧಿಕಾರಿ ಸಭೆಗೆ ಮಾಹಿತಿ ನೀಡಿದರು. ಈ ವೇಳೆ ಉಸ್ತುವಾರಿ ಕಾರ್ಯದರ್ಶಿಯವರು ಪ್ರಯಾಣಿಸುವಾಗ ಯಾವ ದಾಖಲೆಗಳನ್ನು ಪರಿಗಣಿಸಲಾಗುತ್ತದೆ ಎಂದಾಗ ಶಕ್ತಿ ಪ್ರಯಾಣ ರಾಜ್ಯದ ನಿವಾಸಿಗಳಿಗೆ ಮಾತ್ರ ಇದ್ದು ವಿಳಾಸದ ದೃಢೀಕರಣಕ್ಕಾಗಿ ಮಾತ್ರ ಆಧಾರ್ ಮತ್ತು ಇತರೆ ದಾಖಲೆಗಳನ್ನು ಹಾಜರುಪಡಿಸಬೇಕಾಗುತ್ತದೆ ಎಂದರು.

ಈ ವೇಳೆ ಜಿಲ್ಲಾಧಿಕಾರಿಯವರು ಜಗಳೂರಿಗೆ ಸಂಜೆ ಸಮಯದಲ್ಲಿ ಬಸ್‌ಗಳು ಇರುವುದಿಲ್ಲ ಎಂಬ ದೂರುಗಳಿವೆ ಎಂದಾಗ ಜಗಳೂರಿಗೆ ಸಂಜೆ 7.30 ರ ವರೆಗೆ ಬಸ್‌ಗಳಿದ್ದು ಮುಂದಿನ ತಿಂಗಳು ನಿಗಮಕ್ಕೆ ಹೊಸ ಬಸ್‌ಗಳು ಬರಲಿದ್ದು ಎಲ್ಲೆಲ್ಲಿ ಕೊರತೆ ಇದೆ, ಅಂತಹ ಕಡೆ ಹೊಸ ಬಸ್‌ಗಳನ್ನು ಕಲ್ಪಿಸಲಾಗುತ್ತದೆ ಎಂದರು.

ಗೃಹಲಕ್ಷ್ಮಿ;ಮನೆಯಒಡತಿಯಜಮಾನಿಗೆ ಮಾಸಿಕ 2 ಸಾವಿರ ನೀಡುವ ಯೋಜನೆ ಇದಾಗಿದ್ದು ಇದನ್ನು ಪಡೆಯಲು ರೇಷನ್ ಕಾರ್ಡ್, ಆಧಾರ್, ಬ್ಯಾಂಕ್ ಖಾತೆಯ ವಿವರ ಕಡ್ಡಾಯವಾಗಿರುತ್ತದೆ. ಜಿಲ್ಲೆಯಲ್ಲಿ 386716 ಗುರಿ ಇದ್ದು ಈಗಾಗಲೇ 324046 ಮಹಿಳೆಯರು ನೊಂದಣಿ ಮಾಡಿದ್ದು ರಾಜ್ಯದಲ್ಲಿಯೇ ಎರಡನೇ ಸ್ಥಾನದಲ್ಲಿದೆ. ಆಗಸ್ಟ್ 30 ರಂದು ನೊಂದಣಿಯಾದ ಫಲಾನುಭವಿಗಳಿಗೆ ತಲಾ 2 ಸಾವಿರ ಅವರ ಖಾತೆಗೆ ಜಮಾ ಮಾಡಲಾಗುತ್ತದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ವಾಸಂತಿ ಉಪ್ಪಾರ್ ಸಭೆಗೆ ಮಾಹಿತಿ ನೀಡಿದಾಗ ಕಾರ್ಯದರ್ಶಿಯವರು ಒಂದೇ ಮೊಬೈಲ್‌ಗೆ ಅನೇಕ ಖಾತೆ, ಆಧಾರ್ ಲಿಂಕ್ ಇರುತ್ತದೆ, ಪರಿಶೀಲಿಸಿ ಕ್ರಮ ಕೈಗೊಳ್ಳಲು ಸೂಚನೆ ನೀಡಿದರು.

ಗೃಹಜ್ಯೋತಿ; ದಾವಣಗೆರೆ ಜಿಲ್ಲೆಯಲ್ಲಿ 589364 ಬೆಸ್ಕಾಂ ಗ್ರಾಹಕರಿದ್ದು ಇದರಲ್ಲಿ ಈ ಯೋಜನೆಗೆ 405559 ಗ್ರಾಹಕರು ನೊಂದಾಯಿಸಿದ್ದಾರೆ. ಆಗಸ್ಟ್ 15 ರ ವರೆಗೆ 352131 ಗ್ರಾಹಕರಿಗೆ ಶೂನ್ಯ ಬಿಲ್ ನೀಡಲಾಗಿದೆ. ಗೃಹಜ್ಯೋತಿಗೆ ನೊಂದಾಯಿಸಲು ಅವರ ಆಧಾರ್ ಸಂಖ್ಯೆ ಮತ್ತು ಮೊಬೈಲ್ ಸಂಖ್ಯೆಯನ್ನು ಆನ್‌ಲೈನ್ ಮೂಲಕ ಯೋಜನೆಗೆ ನೊಂದಾಯಿಸಬಹುದು. ಇದಕ್ಕೆಯಾವುದೇ ಆದಾಯಮಿತಿ ಇರುವುದಿಲ್ಲ ಎಂದು ಬೆಸ್ಕಾಂ ಕಾರ್ಯಪಾಲಕ ಇಂಜಿನಿಯರ್ ಸಭೆಗೆ ಮಾಹಿತಿ ನೀಡಿದರು.

ಅನ್ನಭಾಗ್ಯ; ಜಿಲ್ಲೆಯಲ್ಲಿ ಅಂತ್ಯೋದಯ ಪಡಿತರ ಚೀಟಿದಾರರು 45659, ಬಿಪಿಎಲ್ 331837 ಕಾರ್ಡ್‌ಗಳು ಮತ್ತು 45712 ಎಪಿಎಲ್ ಕಾರ್ಡ್‌ಗಳಿದ್ದು 719 ನ್ಯಾಯಬೆಲೆ ಅಂಗಡಿಗಳಿರುತ್ತವೆ. ಎಎವೈಗೆ 21 ಕೆಜಿ ಅಕ್ಕಿ, 14 ಕೆಜಿ ರಾಗಿ ಸೇರಿ 35 ಕೆ.ಜಿ.ಆಹಾರಧಾನ್ಯ ನೀಡಲಾಗುತ್ತಿದೆ. ಬಿಪಿಎಲ್‌ಗೆ ಪ್ರತಿ ಸದಸ್ಯರಿಗೆ 3 ಕೆಜಿ ಅಕ್ಕಿ, 2 ಕೆಜಿ ರಾಗಿ ಉಚಿತವಾಗಿ ನೀಡಿ 5 ಕೆ.ಜಿ ಅಕ್ಕಿಯ ಹಣವನ್ನು ನಗದಾಗಿ ಅವರ ಖಾತೆಗೆ ಪ್ರತಿಯೊಬ್ಬ ಸದಸ್ಯರಿಗೆ ರೂ.170 ರಂತೆ ಜಮಾ ಮಾಡಲಾಗುತ್ತಿದೆ. ಜುಲೈನಲ್ಲಿ 288207 ಕಾರ್ಡ್‌ನ 1032982 ಜನರಿಗೆ 16.67 ಕೋಟಿ ಜಮಾ ಮಾಡಲಾಗಿದೆ. ಆಗಸ್ಟ್‌ನಲ್ಲಿ 306418 ಕಾರ್ಡ್‌ನ 1112634 ಜನರಿಗೆ ಸುಮಾರು 17.77 ಕೋಟಿ ಹಣವನ್ನು ಜಮಾ ಮಾಡಲು ಅನುದಾನ ಬಿಡುಗಡೆಯಾಗಿದೆ. ಆಧಾರ್ ಸಂಖ್ಯೆತಪ್ಪಾಗಿ ನಮೂದಿಸಿದ 840, ಬ್ಯಾಂಕ್ ಖಾತೆಗೆ ಆಧಾರ್ ಲಿಂಕ್ ಮಾಡದೇ ಇರುವ 671, ಬ್ಯಾಂಕಿಂಗ್ ಇ.ಕೆವೈಸಿ ಪೂರ್ಣಗೊಳಿಸದ 9260, ಕಳೆದ ಮೂರು ತಿಂಗಳಿನಿಂದ ಪಡಿತರ ಪಡೆಯದೇ ಇರುವ 14137 ಮತ್ತು ಬ್ಯಾಂಕ್ ಖಾತೆ ಹೊಂದದೇ ಇರುವ 170 ಕಾರ್ಡ್‌ದಾರರಿಗೆ ಡಿಬಿಟಿ ಮೂಲಕ ನಗದು ಹಣವನ್ನು ಪಾವತಿಸಿರುವುದಿಲ್ಲ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪನಿರ್ದೇಶಕರು ಸಭೆಗೆ ತಿಳಿಸಿದಾಗ ಜಿಲ್ಲಾಧಿಕಾರಿಯವರು ಲೀಡ್ ಬ್ಯಾಂಕ್ ಮ್ಯಾನೇಜರ್ ಮೂಲಕ ಆಧಾರ್ ತಿದ್ದುಪಡಿ, ಇ.ಕೆವೈಸಿ ಮಾಡಿಸಿ ಉಳಿದ ಫಲಾನುಭವಿಗಳಿಗೂ ನಗದು ಜಮಾ ಮಾಡಲು ಕ್ರಮ ಕೈಗೊಳ್ಳಲು ತಿಳಿಸಿದರು.

ಬಿ.ಪಿ.ಎಲ್.ಗೆ ಮಾನದಂಡ ತಿಳಿಸಿ; ಕಾರ್ಯದರ್ಶಿಯವರು ಜನರು ಬಿ.ಪಿ.ಎಲ್.ಕಾರ್ಡ್ ಪಡೆಯಲು ಇರುವ ಮಾನದಂಡಗಳ ಬಗ್ಗೆ ಜನರಿಗೆ ತಿಳುವಳಿಕೆ ಮೂಡಿಸಲು ತಿಳಿಸಿದಾಗ ವಾರ್ಷಿಕ ಆದಾಯ ರೂ.1.20 ಲಕ್ಷ, ಆದಾಯ ತೆರಿಗೆದಾರರಾಗಿರಬಾರದು, ಸರ್ಕಾರಿ, ನಿಗಮ, ಮಂಡಳಿ ನೌಕರರಾಗಿರಬಾರದು ಮತ್ತು 7 ಎಕರೆಗಿಂತ ಹೆಚ್ಚು ಖುಷ್ಕಿ ಜಮೀನು ಹೊಂದದೇ, ನಾಲ್ಕು ಚಕ್ರದ ವಾಹನ ಸೇರಿ ಇತರೆ ಹೆಚ್ಚಿನ ಸಾಮರ್ಥ್ಯದ ವಾಹನ ಹೊಂದಿರಬಾರದು ಎಂದರು.

ಸಂತ್ರಸ್ಥರ ಮಕ್ಕಳಿಗೆ ಅವಕಾಶ; ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್, ವಸತಿ ಶಾಲೆಗಳಲ್ಲಿಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಸಂತ್ರಸ್ಥರ ಪಟ್ಟಿಯಲ್ಲಿನ ಮಕ್ಕಳಿಗೆ ಮತ್ತು ರೈತರ ಆತ್ಮಹತ್ಯೆಯಾದ ಮಕ್ಕಳಿಗೆ ಹಾಸ್ಟೆಲ್ ಮತ್ತು ವಸತಿ ಶಾಲೆಗಳಲ್ಲಿ ಪ್ರವೇಶ ಕಲ್ಪಿಸಲು ನಿಯಮವಿದ್ದು ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿಗಳು ತಿಳಿಸಿದಾಗ ಸಮಾಜ ಕಲ್ಯಾಣಾಧಿಕಾರಿಯವರು ಜಿಲ್ಲೆಯಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಸಂತ್ರಸ್ಥರು 288 ಜನರು ಇದ್ದು ಇವರ ಮಕ್ಕಳಿಗೆ ಅವಕಾಶ ಕಲ್ಪಿಸಲಾಗುತ್ತದೆ ಎಂದಾಗ ಕಾರ್ಯದರ್ಶಿಯವರು ಪರಿಶೀಲನೆ ನಡೆಸಿ ಅವಕಾಶ ಇರುವವರಿಗೆ ಯೋಜನೆ ಕಲ್ಪಿಸಲು ಸೂಚನೆ ನೀಡಿದರು.

ಶಿಶು, ತಾಯಂದಿರ ಮರಣ ಪ್ರಮಾಣ ತಗ್ಗಿಸಿ; ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ತಾಯಿ, ಮಗುವಿನ ಆರೋಗ್ಯವನ್ನು ಕಾಪಾಡುವ ಮೂಲಕ ಸಾಂಸ್ಥಿಕ ಹೆರಿಗೆ ಮೂಲಕ ನವಜಾತ ಶಿಶು ಮತ್ತು ತಾಯಂದಿರ ಮರಣ ಪ್ರಮಾಣವನ್ನು ತಗ್ಗಿಸಬೇಕಾಗಿದೆ. ಆದರೆ ಜುಲೈನಲ್ಲಿ 8 ತಾಯಂದಿರ ಮರಣವಾಗಿದ್ದು ಇದಕ್ಕೆ ಏನು ಕಾರಣ ಎಂದು ಅಧ್ಯಯನ ಮಾಡಬೇಕೆಂದು ಜಿಲ್ಲಾಧಿಕಾರಿಯವರು ಪ್ರಸ್ತಾಪಿಸಿದಾಗ ಜಿಲ್ಲಾ ಆರೋಗ್ಯಾಧಿಕಾರಿ ಬೇರೆ ಜಿಲ್ಲೆಗಳಿಂದ ರೆಫರೆಲ್ ಆಗಿ ಬಂದಂತಹ ಪ್ರಕರಣಗಳು ಇದಾಗಿವೆ ಎಂದಾಗ ಕಾರ್ಯದರ್ಶಿಯವರು ಪ್ರತಿಯೊಂದು ಪ್ರಕರಣಗಳು ಆಡಿಟ್ ಆಗಬೇಕೆಂದು ಸೂಚನೆ ನೀಡಿದರು.

ಮನೆ ಬಾಗಿಲಿಗೆ ಪಹಣಿ ತಿದ್ದುಪಡಿ, ಪ್ರಶಂಸೆ; ಆಗಸ್ಟ್ 23 ರಂದು ಜಿಲ್ಲೆಯ ಎಲ್ಲಾ ತಾಲ್ಲೂಕು ಕಚೇರಿಗಳಲ್ಲಿ ಪಹಣಿ ತಿದ್ದುಪಡಿ ಆಂದೋಲನ ಏರ್ಪಡಿಸುವ ಮೂಲಕ ಸುಮಾರು 3 ಸಾವಿರ ತಿದ್ದುಪಡಿ ಮಾಡಿ ಸರಿಪಡಿಸಿದ ಪಹಣಿ ಅರ್ಜಿದಾರರಿಗೆ ತಲುಪಿಸಲಾಗಿದೆ ಎಂದು ಜಿಲ್ಲಾಧಿಕಾರಿಯವರು ಪ್ರಸ್ತಾಪಿಸಿದಾಗ ಇಂತಹ ಕಾರ್ಯ ಮೆಚ್ಚುವಂತಹದ್ದಾಗಿದೆ ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ಗ್ರಾಮೀಣ ಇ.ಸ್ವತ್ತಿಗೆ ಕ್ರಮ; ಗ್ರಾಮೀಣ ಭಾಗದಲ್ಲಿ ಇ.ಸ್ವತ್ತಿಗೆ ಸಮಸ್ಯೆಯಾಗುತ್ತಿದೆ ಎಂದಾಗ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಂದ ಮೋಜಣಿ ತತ್ರಾಂಶಕ್ಕೆ ಕಳುಹಿಸಲಾಗುತ್ತಿಲ್ಲ ಎಂದಾಗ ದಾಖಲಾತಿ ಸಮಸ್ಯೆಯಿಂದ ಈ ರೀತಿಯಾಗುತ್ತಿದ್ದು ಸರಿಪಡಿಸಿ ಕ್ರಮ ಕೈಗೊಂಡು ವಿಳಂಬವಾಗದಂತೆ ಮೋಜಿಣಿಗೆ ಕಳುಹಿಸಲು ಸೂಚನೆ ನೀಡಲಾಗುತ್ತದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್ ತಿಳಿಸಿದರು.

ಕಾರ್ಯದರ್ಶಿಯವರು ಮಾತನಾಡಿ ಭೂ ಮಾಪನಾ ಇಲಾಖೆಯಲ್ಲಿ 16918 ಅರ್ಜಿಗಳು ಬಾಕಿ ಇದ್ದು ಜನರೇ ಸರ್ವೆ ಮಾಡಿಕೊಳ್ಳುವ ಸ್ವಾವಲಂಭಿ ಆಫ್ ಬಗ್ಗೆ ಹೆಚ್ಚು ಪ್ರಚಾರ ನೀಡಲು ಸೂಚನೆ ನೀಡಿದರು.

ಬರ ಸಮೀಕ್ಷೆಗೆ ಸಿದ್ದತೆ; ಜುಲೈನಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗಿದೆ ಆದರೆ ಜೂನ್ ಮತ್ತು ಆಗಸ್ಟ್‌ನಲ್ಲಿ ಮಳೆಯ ಕೊರತೆಯಾಗಿದೆ. ಅಚ್ಚುಕಟ್ಟು ಪ್ರದೇಶದಲ್ಲಿ ಮಾತ್ರ ಭದ್ರಾ ಜಲಾಶಯದಿಂದ ಕಾಲುವೆಗಳಿಗೆ ನೀರು ಬಿಡಲಾಗುತ್ತಿದೆ. ಉಳಿದ ಪ್ರದೇಶದಲ್ಲಿ ಮಳೆಯಾಶ್ರಿತ ಬೆಳೆಗಳಿದ್ದು ಬೆಳೆ ಸಮೀಕ್ಷೆಗೆ ತಂಡಗಳನ್ನು ರಚಿಸಿ ಸಮೀಕ್ಷೆ ಕ್ರಮ ಕೈಗೊಳ್ಳಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು.

# ವಿವಿಧ ಬೇಡಿಕೆ ಆಗ್ರಹಿಸಿ ಆಟೋಚಾಲಕರ ಪ್ರತಿಭಟನೆ

» **ಚಿತ್ರದುರ್ಗ**

ಆಟೋ ಚಾಲಕರ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಅನಿರ್ಧಿಷ್ಟಾವಧಿ ಕಾಲ ಇಂದು ಜಿಲ್ಲಾಧಿಕಾರಿಗಳ ಕಚೇರಿ ಬಳಿ ಆಹೋರಾತ್ರಿ ಧರಣಿ ನಡೆಸಲಾಯಿತು.

ಬೇಡಿಕೆಗಳನ್ನು ಈಡೇರಿಸುವಂತೆ ಕಳೆದ 20 ವರ್ಷಗಳಿಂದ ವಿವಿಧ ಆಟೋ ಸಂಘಟನೆಗಳು ಹೋರಾಟ ಮಾಡುತ್ತಾ ಮನವಿ ಸಲ್ಲಿಸಿದ್ದರೂ ಸಹ ಯಾವುದೇ ರೀತಿಯ ಪ್ರಯೋಜನವಾಗಿಲ್ಲ. ಆದ ಕಾರಣ ಈ ಬೇಡಿಕೆಗಳು ಈಡೇರಿಸುವಂತೆ ಒತ್ತಾಯಿಸಿ, ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಛೇರಿ ಎದುರು ಅನಿರ್ಧಿಷ್ಟಕಾಲ ಆಹೋರಾತ್ರಿ ಧರಣಿ ನಡೆಸಲಾಗುತ್ತಿದೆ.




ಹೊಸದಾಗಿ ಬರುವಂತಹ ಆಟೋಗಳಿಗೆ ಆರ್.ಟಿ.ಓ. ಇಲಾಖೆ ಪರ್ಮಿಟ್ ನೀಡಬಾರದು ಚಿತ್ರದುರ್ಗ ಪರ್ಮಿಟ್ ಇಲ್ಲದೆ ಇರುವ ಔಟ್ ಪರ್ಮಿಟ ಆಟೋಗಳನ್ನು ಹಿಡಿದು ಹಾಕಬೇಕು. ಆಟೋ, ಚಾಲಕರ ಸಂಘಟನೆಗಳು ನಿಗದಿ ಪಡಿಸಿರುವ ಸ್ಥಳಗಳಿಗೆ ಆಟೋ ನಿಲ್ದಾಣಗಳನ್ನು ಜಿಲ್ಲಾ ಆಡಳಿತ ಈ ಕೂಡಲೇ ನಿರ್ಮಿಸಿ ಕೊಡಬೇಕು. ಆಟೋ ಚಾಲಕರಿಗಾಗಿಯೇ ಆಟೋ ಚಾಲಕರ ನಿಗಮ ಮಂಡಳಿ ರಚನೆಯಾಗಬೇಕು. ಹಳ್ಳಿಗಳಿಗೆ ಸೀಟು ಹೊಡೆಯುವ ಅಪ್ಪ ಆಟೋಗಳನ್ನು ಈ ಕೂಡಲೇ ನಗರದಿಂದ ಬಹಿಷ್ಕರಿಸಬೇಕು ರಾಜ್ಯ ಸರ್ಕಾರದಿಂದ ಬರುವ ಆಶ್ರಯ ಮನೆ ಯೋಜನೆಯಡಿಯಲ್ಲಿ ನಿರ್ಗತಿಕ ಆಟೋ ಚಾಲಕರಿಗೆ ಆಶ್ರಯ ಮನೆ ನೀಡಬೇಕು, ನಗರ ಸಾರಿಗೆ ಬಸ್ಸುಗಳಿಗೆ ನಿಗಧಿತ ಸಮಯ ಸ್ಥಳ ಈ ಕೂಡಲೇ ನಿಗಧಿಪಡಿಸಬೇಕು. ಆಟೋ ಚಾಲಕರ ಮಕ್ಕಳಿಗೆ ಉನ್ನತ ಶಿಕ್ಷಣಕ್ಕೆ ಸರ್ಕಾರದಿಂದ ಸೌಲತ್ತುಗಳನ್ನು ನೀಡಬೇಕು ಎಂದು ಚಿತ್ರದುರ್ಗ ನಗರ ಆಟೋ ಸಂಘಟನೆಗಳ ಒಕ್ಕೂಟದವತಿಯಿಂದ ಆಗ್ರಹಿಸಲಾಯಿತು.

ಈ ಪ್ರತಿಭಟನೆಯ ನೇತೃತ್ವವನ್ನು ಜಿಲ್ಲಾಧ್ಯಕ್ಷ ತಿಪ್ಪೇಸ್ವಾಮಿ ವಹಿಸಿದ್ದರು. ಇದರಲ್ಲಿ ಕುಮಾರಸ್ವಾಮಿ, ವೆಂಕಟೇಶ್, ಸಿದ್ದು, ಅಮರೇಶ್, ಇಕ್ಬಾಲ್, ಆಸಿಫ್ ಸೇರಿದಂತೆ ಇತರರು ಭಾಗವಹಿಸಿದ್ದರು.

### ಚಿಂತಕ ಚಕ್ರವರ್ತಿ ಸೂಲಿಬೆಲೆ ವಿರುದ್ಧ ಎಫ್‌ಐಆರ್ ದಾಖಲು



ಶಿವಮೊಗ್ಗದ ವಿನೋಬನಗರ ಪೊಲೀಸ್ ಠಾಣೆಯಲ್ಲಿ ಚಿಂತಕ ಚಕ್ರವರ್ತಿ ಸೂಲಿಬೆಲೆ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಕೆಪಿಸಿಸಿ ಸಾಮಾಜಿಕ ಜಾಲತಾಣ ವಿಭಾಗದ ಉಪಾಧ್ಯಕ್ಷೆ ಸೌಗಂಧಿಕಾಗೆ ವೈಯಕ್ತಿಕ ತೇಜೋವಧೆ ಮಾಡಿದ್ದು ಫೇಸ್‌ಬುಕ್‌ನಲ್ಲಿ ಅವಹೇಳನ ಆರೋಪ ಹಿನ್ನೆಲೆ ಐಪಿಸಿ ಸೆಕ್ಷನ್ 504, 509ರ ಅಡಿ ಎಫ್‌ಐಆರ್ ದಾಖಲಾಗಿದೆ.

## ಪ್ರಮುಖ ಸುದ್ದಿ

### ಟೀಶರ್ಟ್ ಖರೀದಿಸಲು ಬಂದ ಅಪರಿಚಿತ ವ್ಯಕ್ತಿಗಳಿಂದ ಖಾರದ ಪುಡಿ ಎರಚಿ 2 ಲಕ್ಷ ಮೌಲ್ಯದ ಬಂಗಾರದ ಸರ ಕಿತ್ತು ಪರಾರಿ

# ಚಳ್ಳಕೆರೆಯ ದವನಂ ಟೆಕ್ಸ್‌ಟೈಲ್ಸ್‌ನಲ್ಲಿ ಕಳ್ಳರ ಕೈಚಳಕ

» **ಚಳ್ಳಕೆರೆ**

ಚಳ್ಳಕೆರೆ ನಗರದ ಠಾಣಾ ವ್ಯಾಪ್ತಿಯಲ್ಲಿ ಮತ್ತೆ ನಿರಂತರ ಸರಗಳ್ಳತನ, ಕಳ್ಳತನ ಪ್ರಕರಣಗಳು ಹೆಚ್ಚಾಗುತ್ತಿದ್ದು, ಪೊಲೀಸ್ ಇಲಾಖೆಗೆ ಸವಾಲಾಗಿ ಪರಿಣಮಿಸಿದೆ. ಭಾನುವಾರ ಬೆಳಗ್ಗೆ ಪಾವಗಡ ರಸ್ತೆಯ ದವನಂ ಟೆಕ್ಸ್‌ಟೈಲ್ಸ್ ಅಂಗಡಿ ಮಾಲೀಕರ ಕಣ್ಣಿಗೆ ಖಾರದಪುಡಿ ಎರಚಿ ಎರಡು ಲಕ್ಷ ಮೌಲ್ಯದ ಬಂಗಾರ ಸರ ಕಿತ್ತು ಪರಾರಿಯಾದ ಘಟನೆ ವರದಿಯಾಗಿದೆ.

ದವನಂ ಟೆಕ್ಸ್‌ಟೈಲ್ಸ್ ಮಾಲೀಕ ಡಿ.ಸಿ.ಗೋವಿಂದರಾಜು(60) ಬೆಳಗ್ಗೆ ಸುಮಾರು 9ರ ಸಮಯದಲ್ಲಿ ಅಂಗಡಿಯಲ್ಲಿದ್ದಾಗ ಮೂವರು ಅಪರಿಚಿತ ವ್ಯಕ್ತಿಗಳು ಜೀನ್ಸ್ ಪ್ಯಾಂಟ್ ಹಾಗೂ ಟೀ ಶರ್ಟ್ ದರಿಸಿ ಅಂಗಡಿಯ ಮುಂದೆ ನಿಂತಿದ್ದು ಆ ಪೈಕಿ ಒಬ್ಬ ಒಳಗೆ ಬಂದು ಟೀಶರ್ಟ್ ತೋರಿಸಿ ಎಂದು ಕೇಳಿದಾಗ ಆ ಅಪರಿಚಿತ ವ್ಯಕ್ತಿಗೆ ಎರಡ್ಮೂರು ಬಣ್ಣದ ಟೀಶರ್ಟ್ ತೋರಿಸುವಷ್ಟರಲ್ಲಿ ಹೊರಗೆ






ಇದ್ದ ಇಬ್ಬರು ಒಳಗೆ ಪ್ರವೇಶಿಸಿ ಟೀಶರ್ಟ್ ನೋಡುವಂತೆ ನಟಿಸಿ ಮಾಲೀಕನ ಕಣ್ಣಿಗೆ ಖಾರದ ಪುಡಿ ಎರಚಿ ಸರ ಕಿತ್ತುಕೊಂಡು ಪರಾರಿಯಾಗುವಾಗ ಟೀಶರ್ಟ್‌ನ್ನು ಪಕ್ಕದ ಅಂಗಡಿ ಮುಂದೆ ಬಿಸಾಕಿ ತಾವು ಬಂದ ಮೋಟಾರ್ ಬೈಕ್‌ನಲ್ಲಿಪರಾರಿಯಾಗಿದ್ದಾರೆ. ಗಾಬರಿಗೊಂಡ ಡಿ.ಸಿ.ಗೋವಿಂದರಾಜು ಕೂಡಲೇ ಕೂಗಿಕೊಂಡಿದ್ದಾನೆ, ಅಕ್ಕಪಕ್ಕದ ಅಂಗಡಿಯವರು ಬಂದು ಆತನನ್ನು ಉಪಚರಿಸಿ ಕಳ್ಳತನ ವೆಸಗಿದ ವ್ಯಕ್ತಿಗಳ ಹುಡುಕಾಟ ನಡೆಸಿದ್ದಾರೆ. ಆದರೆ, ಸ್ವಲ್ಪ ದೂರದಲ್ಲೇ ಅಪರಿಚಿತ ವ್ಯಕ್ತಿ ತೆಗೆದುಕೊಂಡಿದ್ದ ಟೀಶರ್ಟ್ ಸಿಕ್ಕಿದೆ. ಸುದ್ದಿ ತಿಳಿದ ಕೂಡಲೇ ಇನ್ಸ್‌ಪೆಕ್ಟರ್ ರಾಜ ಫಕ್ರುದ್ದೀನ್ ದೇಸಾಯಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

## ಫಾಸ್ಟ್ ನ್ಯೂಸ್

### ಕೆಡಿಪಿ ಸಭೆಯಲ್ಲಿ ಸಿಎಂ ಪುತ್ರ ಡಾ.ಯತೀಂದ್ರ ಸಿದ್ದರಾಮಯ್ಯ ಭಾಗಿ

ಮೈಸೂರು ಜಿ.ಪಂ. ಸಭಾಂಗಣದಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಕೆಡಿಪಿ ಸಭೆ ನಡೆಯುತ್ತಿದ್ದು ಸಿಎಂ ಪುತ್ರ ಡಾ.ಯತೀಂದ್ರ ಸಿದ್ದರಾಮಯ್ಯ ಭಾಗಿಯಾಗಿದ್ದಾರೆ. ಮೈಸೂರು ಜಿಲ್ಲಾ ಕೆಡಿಪಿ ಸದಸ್ಯರಾಗಿ ನೇಮಕವಾಗಿರುವ ಯತೀಂದ್ರ ವೇದಿಕೆಯ ಮೊದಲ ಸಾಲಿನಲ್ಲಿ ಕುಳಿತಿದ್ದಾರೆ. ಶಾಸಕರಾದ ತನ್ವೀರ್ ಸೇಠ್, ಅನಿಲ್ ಚಿಕ್ಕಮಾದು, ದರ್ಶನ್ ಧ್ರುವನಾರಾಯಣ್, ಶ್ರೀವತ್ಸ, ಬಿಜೆಪಿ ಸಂಸದ ಪ್ರತಾಪ್ ಸಿಂಹ, ಎಂಎಲ್‌ಸಿ ಹೆಚ್.ವಿಶ್ವನಾಥ್ ಕೂಡ ಸಭೆಯಲ್ಲಿ ಭಾಗಿಯಾಗಿದ್ದಾರೆ.

### ಕಾಂಗ್ರೆಸ್ ಪಕ್ಷಕ್ಕೆ ಯಾರೇ ಬಂದರೂ ಸ್ವಾಗತ ಎಂದ ಸಿಎಂ ಸಿದ್ದರಾಮಯ್ಯ

ವಲಸಿಗ ಬಿಜೆಪಿ ಶಾಸಕರು ಕಾಂಗ್ರೆಸ್‌ಗೆ ಮರು ಸೇರ್ಪಡೆ ವಿಚಾರಕ್ಕೆ ಸಂಬಂಧಿಸಿ ಕಾಂಗ್ರೆಸ್ ಪಕ್ಷಕ್ಕೆ ಯಾರೇ ಬಂದರೂ ಸ್ವಾಗತ ಎಂದು ಮೈಸೂರಿನಲ್ಲಿ ಸಿಎಂ ಸಿದ್ದರಾಮಯ್ಯ ಹೇಳಿದರು. ಪಕ್ಷ ಬಿಟ್ಟು ಹೋದವರಷ್ಟೇ ಅಲ್ಲ, ಯಾರೇ ಬಂದರೂ ಸ್ವಾಗತ. ರಾಜ್ಯದಲ್ಲಿ ಬಿಜೆಪಿ ಎಲ್ಲಿದೆ?, ಬಿಜೆಪಿ ದಿವಾಳಿಯಾಗಿದೆ. ಈವರೆಗೂ ವಿಪಕ್ಷ ನಾಯಕನ ಆಯ್ಕೆ ಮಾಡಲು ಸಾಧ್ಯವಾಗಿಲ್ಲ. ಪ್ರಧಾನಿ ಮೋದಿಯೇ ಭೇಟಿಗೆ ಬರಬೇಡಿ ಎಂದಿದ್ದರಂತೆ ಎಂದು ಬಿಜೆಪಿ ವಿರುದ್ಧ ಸಿಎಂ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದರು.

### ಚಾಕುವಿನಿಂದ ಇರಿದು ಅಪ್ರಾಪ್ತೆ ಅಪಹರಿಸಿದ್ದ ಯುವಕ ಬಂಧನ

ಚಾಕುವಿನಿಂದ ಇರಿದು ಅಪ್ರಾಪ್ತೆ ಅಪಹರಿಸಿದ್ದ ಯುವಕನನ್ನು ಪೊಲೀಸರು ಬಂಧಿಸಿದ್ದಾರೆ. ರಾಮನಗರದ ಜ್ಯೂನಿಯರ್ ಕಾಲೇಜು ಬಳಿ ಅಪ್ರಾಪ್ತೆ ಸಂಜನಾಗೆ ಚಾಕುವಿನಿಂದ ಇರಿದು ಅಪಹರಿಸಿ ಕರೆದುಕೊಂಡು ಹೋಗುತ್ತಿದ್ದ ಇನ್ನೋವಾ ಚೇಸ್ ಮಾಡಿ ಯುವಕನನ್ನು ಬಂಧಿಸಲಾಗಿದೆ. ಸಂಜನಾಳನ್ನು ರಕ್ಷಿಸಿ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

### ಬಿಜೆಪಿಯ ಯಾವ ಶಾಸಕರೂ ಕಾಂಗ್ರೆಸ್ ಪಕ್ಷಕ್ಕೆ ಹೋಗಲ್ಲ-ಬಿ.ವೈ. ರಾಘವೇಂದ್ರ

ಬಿಜೆಪಿಯ ಯಾವ ಶಾಸಕರೂ ಕಾಂಗ್ರೆಸ್ ಪಕ್ಷಕ್ಕೆ ಹೋಗಲ್ಲ ಎಂದು ಶಿವಮೊಗ್ಗದಲ್ಲಿ ಬಿಜೆಪಿ ಸಂಸದ ಬಿ.ವೈ.ರಾಘವೇಂದ್ರ ಹೇಳಿಕೆ ನೀಡಿದರು. ಅಪಪ್ರಚಾರ ಮೂಲಕ ವಿಪಕ್ಷವನ್ನು ವೀಕ್ ಮಾಡುವ ಕೆಲಸ ಮಾಡಲಾಗುತ್ತಿದೆ. ಅವರ ದೌರ್ಬಲ್ಯ ಮುಚ್ಚಿಕೊಳ್ಳಲು ಅಪಪ್ರಚಾರ ಮಾಡ್ತಿದ್ದಾರೆ. ಕುಮಾರ್ ಬಂಗಾರಪ್ಪ ಯಾವುದೇ ಕಾರಣಕ್ಕೂ ಪಕ್ಷ ಬಿಡಲ್ಲ ಎಂದು ಸಂಸದ ಬಿ.ವೈ. ರಾಘವೇಂದ್ರ ತಿಳಿಸಿದರು.

### 101 ಅಡಿ ಆಳಕ್ಕೆ ಕುಸಿದ ಕೆಆರ್‌ಎಸ್ ಜಲಾಶಯದ ನೀರಿನ ಮಟ್ಟ

ಮಂಡ್ಯಜಿಲ್ಲೆಯರೈತರಲ್ಲಿಆತಂಕಮುಂದುವರೆದಿದೆ. ಕೆಆರ್‌ಎಸ್ ಜಲಾಶಯದ ನೀರಿನ ಮಟ್ಟ 101 ಅಡಿ ಆಳಕ್ಕೆ ಕುಸಿದಿದೆ. ಕೆಆರ್‌ಎಸ್ ಜಲಾಶಯದ ಒಳ ಹರಿವು 1378 ಕ್ಯೂಸೆಕ್. ಕೆಆರ್‌ಎಸ್ ಜಲಾಶಯದ ಹೊರ ಹರಿವು 2345 ಕ್ಯೂಸೆಕ್ ನೀರು.

### ಪೋಕ್ಸೋ ಪ್ರಕರಣದಲ್ಲಿ ಅಪರಾಧಿಗೆ 20 ವರ್ಷಶಿಕ್ಷೆ

ಬಂಗಾರಪೇಟೆ ನಿವಾಸಿ ವಿನೋದ್ ಕುಮಾರ್ ಗೆ ಪೋಕ್ಸೋ ಪ್ರಕರಣದಲ್ಲಿ 20 ವರ್ಷ ಜೈಲು ಶಿಕ್ಷೆ ವಿಧಿಸಿ ಕೋಲಾರ ಜಿಲ್ಲಾ ಹೆಚ್ಚುವರಿ, ವಿಶೇಷ ಶೀಘ್ರಗತಿ ನ್ಯಾಯಾಲಯ ಆದೇಶ ಹೊರಡಿಸಿದೆ. ಹಾಗೂ ಅಪರಾಧಿಗೆ 60 ಸಾವಿರ ದಂಡ ವಿಧಿಸಿ ತೀರ್ಪು ನೀಡಿದೆ.

### ಆದಿತ್ಯ-ಐ1 ಮಿಷನ್ ಉಡಾವಣೆಗೆ ಇಸ್ರೋ ಸಿದ್ಧತೆ

ಚಂದ್ರಯಾನ–3 ಯಶಸ್ವಿ ಬೆನ್ನಲ್ಲೇ ಆದಿತ್ಯ–ಐ1 ಮಿಷನ್ ಉಡಾವಣೆಗೆ ಇಸ್ರೋ ವಿಜ್ಞಾನಿಗಳು ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ. ಬಹುತೇಕ ಸೆಪ್ಟೆಂಬರ್ 2ರಂದು ಆದಿತ್ಯ–ಐ1 ಉಡಾವಣೆ ಸಾಧ್ಯತೆ ಇದೆ. ಇಂದು ಅಥವಾ ನಾಳೆ ಅಧಿಕೃತ ಉಡಾವಣಾ ದಿನಾಂಕ ನಿಗದಿ ಸಾಧ್ಯತೆ. ಆದಿತ್ಯ–ಐ1 ಮಿಷನ್ ಸೂರ್ಯನ ಕುರಿತು ಅಧ್ಯಯನ ಮಾಡಲಿದೆ. ಅಗತ್ಯವಸ್ತು & ತಂತ್ರಜ್ಞಾನ ಸಿದ್ಧಪಡಿಸಿಕೊಳ್ಳಲು ಇಸ್ರೋ ಮುಂದಾಗಿದೆ.

# ನಾರಿ ಸಂಚಾರಕ್ಕೆ ಶಕ್ತಿ ಯೋಜನೆ: ಓಬವ್ವ ನಾಡಿನಲ್ಲಿ ಮಹಿಳೆಯರಿಂದ ಉತ್ತಮ ಸ್ಪಂದನೆ

» **ಚಿತ್ರದುರ್ಗ**

ಮಹಿಳೆಯರು, ವಿದ್ಯಾರ್ಥಿನಿಯರು ಮತ್ತು ಲಿಂಗತ್ವ ಅಲ್ಪಸಂಖ್ಯಾತರು ಸೇರಿ ರಾಜ್ಯದ ಸಮಸ್ತ ನಾರಿಯರ ಸಂಚಾರಕ್ಕೆ ಶಕ್ತಿಯನ್ನು ನೀಡಿದೆ. ರಾಜ್ಯ ಸರ್ಕಾರದ "ಶಕ್ತಿ" ಯೋಜನೆ. ಇದರ ಮೂಲಕ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ನಗರ ಸಾರಿಗೆ, ಸಾಮಾನ್ಯ ಮತ್ತು ವೇಗದೂತ ಬಸ್ಸುಗಳಲ್ಲಿ ರಾಜ್ಯಾದ್ಯಂತ ಉಚಿತವಾಗಿ ಪ್ರಯಾಣಿಸಲು ನಾರಿಯರಿಗೆ ಅವಕಾಶ ಲಭಿಸಿದೆ.

ಯೋಜನೆಯು ಸಾಮಾಜಿಕ ಕ್ಷೇತ್ರದಲ್ಲಿ ಹಲವು ರೀತಿಯ ಬದಲಾವಣೆಗೆ ಸಾಕ್ಷಿಯಾಗಿದೆ. ಮುಖ್ಯವಾಗಿ ಗ್ರಾಮೀಣ ಭಾಗದಿಂದ ನಗರ ಪಟ್ಟಣಗಳಿಗೆ ತೆರಳಿ ದುಡಿಯುವ ಮಹಿಳೆಯರಿಗೆ ವರದಾನವಾಗಿದೆ. ಖಾಸಗಿ ಹಾಗೂ ಅಸಂಘಟಿತ ವಲಯಗಳಲ್ಲಿ ಕೆಲಸ ನಿರ್ವಹಿಸುವ ಮಹಿಳೆಯರು ಸಂಚಾರಿ ವೆಚ್ಚದಿಂದ ಮುಕ್ತರಾಗಿದ್ದಾರೆ. ಸಾಮಾನ್ಯವಾಗಿ ದುಡಿಯಲೆಂದೇ ತಮ್ಮ ತಿಂಗಳ ಆದಾಯದ ಶೇ.10 ರಷ್ಟು ಹಣವನ್ನು ಸಂಚಾರಕ್ಕಾಗಿ ವ್ಯಯಿಸಬೇಕಿತ್ತು. ಇನ್ನು ಶಾಲಾ ವಿದ್ಯಾರ್ಥಿನಿಯರಿಗೆ ವಾರ್ಷಿಕ ಪಾಸು ಪಡೆಯಲು ನೀಡಬೇಕಿದ್ದ ಹಣದಲ್ಲಿಯೂ ಉಳಿತಾಯವಾಗಿದೆ. ಗ್ರಾಮೀಣ ಭಾಗದಲ್ಲಿ ಮಹಿಳೆಯುರು ಉತ್ತಮ ಚಿಕಿತ್ಸೆ ಅರಸಿ ಪಟ್ಟಣಗಳಿಗೆ ಬಂದು ಹೋಗಲು ಯೋಜನೆಯಿಂದ ಸಾಧ್ಯವಾಗಿದೆ. ಉದ್ಯೋಗ, ಶಿಕ್ಷಣ



ಹಾಗೂ ಪ್ರವಾಸ ಸೇರಿದಂತೆ ಹಲವು ಚಟುವಟಿಕೆಗಳಿಗೆ ಶಕ್ತಿ ಯೋಜನೆಯಿಂದ ಶಕ್ತಿ ಲಭಿಸಿದೆ.ಒನಕೆ ಓಬವ್ವ ತನ್ನ ತೋಳ್ಬಲದಿಂದ ಪಾಳೇಗಾರರ ಕೋಟೆ ರಕ್ಷಿಸಿದ್ದಳು.

ಇಂತಹ ದಿಟ್ಟ ಮಹಿಳೆಯ ನಾಡು ಚಿತ್ರದುರ್ಗ ಜಿಲ್ಲೆಯಲ್ಲಿ 'ಶಕ್ತಿ ಯೋಜನೆ' ಗೆ ಉತ್ತಮ ಸ್ಪಂದನೆ ದೊರಕಿದೆ. ಯೋಜನೆ ಜಾರಿಯಾದ ಜೂನ್ 11 ರಿಂದ ಮಹಿಳೆಯರ ಓಡಾಟ ಹೆಚ್ಚಾಗಿದೆ. ಆ. 23 ರವರೆಗಿನ ಅಂಕಿ ಅಂಶದಂತೆ ಒಟ್ಟು 43.75 ಲಕ್ಷ ಮಹಿಳೆಯುರು ಚಿತ್ರದುರ್ಗ ವಿಭಾಗದ ಬ□□ಗಳಲ್ಲಿ ಸಂಚಾರ ಮಾಡಿದ್ದಾರೆ. ಇದರ ಒಟ್ಟು ಮೊತ್ತ ರೂ.16.57 ಕೋಟಿಯಾಗಿದೆ. ಶಕ್ತಿ ಯೋಜನೆ ಜಾರಿಯಾದಾಗಿನಿಂದ ಪ್ರತಿದಿನ ಸರಾಸರಿ 50 ಸಾವಿರಕ್ಕೂ ಹೆಚ್ಚು ಮಹಿಳೆಯರು ಚಿತ್ರದುರ್ಗ ವಿಭಾಗದ ಬ□□ಗಳಲ್ಲಿ ಉಚಿತವಾಗಿ ಪ್ರಯಾಣಿಸುತ್ತಿದ್ದಾರೆ. ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿಯೂ ಮಹಿಳೆಯುರು ಯೋಜನೆಯ ಲಾಭ ಪಡೆದಿದ್ದಾರೆ.

### ತುಂಬಿ-ತುಳುಕುತ್ತಿರುವ ಬಸ್ಸುಗಳು

ಸರ್ಕಾರಿ ಬಸ್ ಗಳಲ್ಲಿ ಪ್ರಯಾಣಿಕರ ಸಂಖ್ಯೆಯಲ್ಲಿ ಏರಿಕೆಯಾಗಿದ್ದು, ಬಸ್ಸುಗಳಲ್ಲಿ ಪ್ರಯಾಣಿಕರ ಅದರಲ್ಲೂ ಮಹಿಳಾ ಪ್ರಯಾಣಿಕರ ದಟ್ಟಣೆಯನ್ನು ಹೆಚ್ಚಿಸಿದೆ. ಸರ್ಕಾರವು ಶಕ್ತಿ ಯೋಜನೆಯು ಬಡ ಮತ್ತು ಕೆಳ–ಮಧ್ಯಮ ವರ್ಗದವರಿಗೆ ಕೊಳ್ಳುವ ಶಕ್ತಿಯನ್ನು ಹೆಚ್ಚಿಸಲು ಕಾರಣವಾಗಿದೆ. ಇದಕ್ಕೆ ಪ್ರತಿಯಾಗಿ, ಸರ್ಕಾರಕ್ಕೆ ಹೆಚ್ಚಿನ ಆದಾಯವನ್ನು ಮತ್ತು ಆರ್ಥಿಕ ಬೆಳವಣಿಗೆಗೆ ವೇಗ ನೀಡಲು ಸಹಕಾರಿಯಾಗಿದೆ. ಗ್ರಾಮೀಣ ಪ್ರದೇಶದ ಕೆಲವು ಬಡ ಕುಟುಂಬಗಳ ಮಹಿಳೆಯರು ಇದುವರೆಗೂ ತಾವು ನೋಡದೇ ಇರುವ ರಾಜ್ಯದ ಹಲವು ಪ್ರೇಕ್ಷಣೀಯ ಸ್ಥಳಗಳಿಗೂ ಉಚಿತವಾಗಿ ಭೇಟಿ ನೀಡುವಂತಾಗಿದ್ದು, ಮಹಿಳಾ ಕೇಂದ್ರಿತ ಶಕ್ತಿ ಯೋಜನೆಗೆ ಹಾಗೂ ಯೋಜನೆ ಜಾರಿಗೊಳಿಸಿದ ಹೊಸ ಸರ್ಕಾರದ ಆಶಯಕ್ಕೆ ರಾಜ್ಯಾದ್ಯಂತ ಮಹಿಳೆಯರಿಂದ ಮೆಚ್ಚುಗೆ ವ್ಯಕ್ತವಾಗುತ್ತಿದೆ.

### ಶಕ್ತಿ ಯೋಜನೆಯಿಂದ ಆದಾಯ ಹೆಚ್ಚಳ

ಶಕ್ತಿ ಯೋಜನೆಯ ಫಲದಿಂದ ಕರ್ನಾಟಕದ ದೇವಾಲಯಗಳಲ್ಲಿ ಮಹಿಳೆಯರೇ ತುಂಬಿ ತುಳುಕುತ್ತಿದ್ದು, ದೇವಾಲಯಗಳ ಹುಂಡಿ ಭರ್ತಿಯಾಗಿ, ಆದಾಯ ಹೆಚ್ಚಾಗುತ್ತಿದೆ. ಮುಜರಾಯಿ ದೇಗುಲಗಳಿಗೆ ಭಕ್ತರ ಭೇಟಿ ಹೆಚ್ಚಿದೆ. ಇದರಿಂದ ಬಹುತೇಕ ದೇವಾಲಯಗಳ ಆದಾಯವೂ ದುಪ್ಪಟ್ಟಾಗಿದೆ. ಶಕ್ತಿ ಯೋಜನೆಯಿಂದ ರಾಜ್ಯದಲ್ಲಿ ಮಹಿಳೆಯರು, ವಿದ್ಯಾರ್ಥಿನಿಯರು, ಮಹಿಳಾ ನೌಕರ ವರ್ಗ ಫುಲ್ ಖುಷ್ ಆಗಿದ್ದಾರೆ. ಅದರ ಜೊತೆಜೊತೆಗೆ ರಾಜ್ಯ ಸಾರಿಗೆ ಸಂಸ್ಥೆಯ ನಿಗಮಗಳೂ ಆದಾಯ ಹೆಚ್ಚಳದಿಂದ ಹೊಸ ಚೈತನ್ಯ ಪಡೆದುಕೊಂಡಿವೆ. ಆಧಾರ್, ಮತದಾರರ ಗುರುತಿನ ಚೀಟಿ, ಚಾಲನಾ ಪರವಾನಿಗೆ ಪತ್ರ, ಸರ್ಕಾರಿ ಸಂಸ್ಥೆಗಳು ವಿತರಿಸಿರುವ ಗುರುತಿನ ಚೀಟಿ ತೋರಿಸಿ, ಶೂನ್ಯ ಮೊತ್ತ ಟಿಕೆಟ್ ಪಡೆದು ಪ್ರಯಾಣಿಸಬಹುದು. ಶಕ್ತಿ ಯೋಜನೆಯಿಂದ ಪುರುಷರಿಗೆ ತೊಂದರೆ ಆಗದಂತೆ ಅಂತರಾಜ್ಯ, ಎ.ಸಿ. ಮತ್ತು ಐಷಾರಾಮಿ ಬ□□ಗಳನ್ನು ಹೊರತು ಪಡಿಸಿ ಇತರೆ ಬ□□ಗಳಲ್ಲಿ ಶೇ.50 ರಷ್ಟು ಆಸನಗಳನ್ನು ಮೀಸಲಿರಿಸಲಾಗಿದೆ.



ಶಕ್ತಿ ಯೋಜನೆಯಿಂದಾಗಿ ನಾವು ಬಸ್‌ನಲ್ಲಿ ಉಚಿತವಾಗಿ ಪ್ರಯಾಣಿಸುವಂತಾಗಿದೆ, ಇದೇ ರಾಜ್ಯದವರೇ ಆಗಿದ್ದರೂ, ಆರ್ಥಿಕ ತೊಂದರೆ ಇದ್ದ ಕಾರಣ ರಾಜ್ಯದ ಕರಾವಳಿ, ಉತ್ತರ ಕರ್ನಾಟಕದ ಅನೇಕ ದೇಗುಲಗಳನ್ನು ನಾವು ನೋಡಿಯೇ ಇರಲಿಲ್ಲ. ಇದೀಗ ಉಚಿತ ಬಸ್ ಪ್ರಯಾಣದಿಂದಾಗಿ, ಕರಾವಳಿ ಮತ್ತು ಉತ್ತರ ಕರ್ನಾಟಕದ ಅನೇಕ ದೇಗುಲಗಳು ಹಾಗೂ ಪ್ರೇಕ್ಷಣೀಯ ಸ್ಥಳಗಳನ್ನು ಕುಟುಂಬ ಸಮೇತ ಹೋಗಿಬರಲು ಸಾಧ್ಯವಾಗಿದೆ. ನೀಡಿದ ಭರವಸೆಯಂತೆ ಯೋಜನೆ ಜಾರಿಗೆ ತಂದ ಹೊಸ ಸರ್ಕಾರಕ್ಕೆ ಧನ್ಯವಾದಗಳು.

» **ಸುಮಾ ಎ., ಚಿತ್ರದುರ್ಗ, ಗೃಹಿಣಿ**

ಉನ್ನತ ವ್ಯಾಸಂಗಕ್ಕಾಗಿ ಚಿತ್ರದುರ್ಗದಿಂದ ದಾವಣಗೆರೆಗೆ ಹೋಗಿಬರುತ್ತಿದ್ದೆ, ಇದಕ್ಕಾಗಿ ಬಸ್ ಪಾಸ್ ಮಾಡಿಸಿಕೊಳ್ಳಬೇಕಿತ್ತು. ಇದೀಗ, ಅದ್ಯಾವುದೇ ಉಸಾಬರಿ ಇಲ್ಲ. ಆಧಾರ್ ಕಾರ್ಡ್ ತೋರಿಸಿ, ಶೂನ್ಯ ಮೊತ್ತದ ಬಸ್ ಟಿಕೇಟ್ ಪಡೆದು, ಸುಲಭವಾಗಿ ಕಾಲೇಜಿಗೆ ಹೋಗಿಬರುತ್ತಿದ್ದೇನೆ. ಶಕ್ತಿ ಯೋಜನೆ ಜಾರಿಗೆ ತಂದ ಹೊಸ ಸರ್ಕಾರಕ್ಕೆ ಥ್ಯಾಂಕ್.

» **ಜಾಹ್ನವಿ ಜಿ.ಎನ್., ಚಿತ್ರದುರ್ಗ, ವಿದ್ಯಾರ್ಥಿನಿ**

# ಹೊಳಲ್ಕೆರೆ ಬ್ರಹ್ಮಕುಮಾರಿ ಈಶ್ವರಿ ವಿಶ್ವ ವಿದ್ಯಾನಿಲಯದಲ್ಲಿ ರಕ್ಷಾ ಬಂಧನ ಕಾರ್ಯಕ್ರಮ

» **ಹೊಳಲ್ಕೆರೆ**

ಧಾರ್ಮಿಕ ಸದ್ಭಾವನೆಯ ಸಂದೇಶಗಳನ್ನು ಬಿತ್ತುವ ಮೂಲಕ ಸಮಾಜವನ್ನು ಸುಸ್ಥಿತಿಯತ್ತ ಸಾಗಿಸಲು ಸಾಧ್ಯ ಎಂದು ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾನಿಲಯದ ಪ್ರಮುಖರಾದ ಬಿಕೆ. ಮಹಾಲಕ್ಷ್ಮಿಅಕ್ಕ ತಿಳಿಸಿದರು.

ಅವರು ಪಟ್ಟಣದ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರ್ ವಿಶ್ವವಿದ್ಯಾನಿಲಯದಲ್ಲಿ ಹಮ್ಮಿಕೊಂಡಿದ್ದ ರಕ್ಷಾ ಬಂಧನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಧಾರ್ಮಿಕ ಸಂಸ್ಕಾರದಿಂದ ಮಾತ್ರ ಸಮಾಜದಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡಲು ಸಾಧ್ಯ. ಹಾಗಾಗಿ ಪ್ರತಿಯೊಬ್ಬರು ಧಾರ್ಮಿಕ ಸಂಸ್ಕಾರವನ್ನು ಕುಟುಂಬದಲ್ಲಿ ಬೆಳೆಸುವ ಕೆಲಸ ಆಗಬೇಕಾಗಿದೆ ಎಂದು ತಿಳಿಸಿದರು.

ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾನಿಲಯದ ಸಂಚಾಲಕರಾದ ಬಿಕೆ ಸುಮಿತ್ರಕ್ಕ ಮಾತನಾಡಿ, ಪ್ರತಿಯೊಬ್ಬರಲ್ಲಿ ಸ್ನೇಹ ಶಾಂತಿ ಬೆಳೆಸುವ



ನಿಟ್ಟಿನಲ್ಲಿ ರಕ್ಷಾಬಂಧನ ಕಾರ್ಯಕ್ರಮ ಅರ್ಥಪೂರ್ಣವಾಗಿದೆ. ಸಹೋದರತ್ವ ರಕ್ಷಣೆ ಕುರಿತು ಸಂದೇಶವನ್ನು ನೀಡುವ ಮಹಾನ್ ಹಬ್ಬ ರಕ್ಷಾಬಂಧನ. ಈ ಹಬ್ಬದ ಅಂಗವಾಗಿ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರ್ ವಿಶ್ವವಿದ್ಯಾನಿಲಯ ಸಮಾಜದಲ್ಲಿರುವ ಪ್ರತಿಯೊಬ್ಬ ಅಣ್ಣಂದಿರಿಗೂ ಅಕ್ಕಂದಿರು ರಕ್ಷಣೆಗೆ ರಕ್ಷೆದಾರ ಕಟ್ಟುವ ಮೂಲಕ ಸಮಾಜವನ್ನು ರಕ್ಷಾ ಕವಚ ದಂತೆ ನೋಡಿಕೊಳ್ಳಲಾಗುತ್ತದೆ. ಪ್ರತಿಯೊಬ್ಬರು ಪ್ರಜಾಪಿತನ ಸೇವೆಯಲ್ಲಿ ಪಾಲ್ಗೊಂಡು ಧಾರ್ಮಿಕ ಸಂಸ್ಕಾರದ ಚಿಂತನೆಯನ್ನು ನಡೆಸಬೇಕು ಎಂದು ತಿಳಿಸಿದರು.

### ಅಲ್ಪಸಂಖ್ಯಾತರ ಸಮುದಾಯಗಳಿಂದ ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

**ದಾವಣಗೆರೆ:** ಪ್ರಸಕ್ತ ಸಾಲಿಗೆ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ ಪಾರ್ಸಿಗಳು ಹಾಗೂ ಆಂಗ್ಲೋ ಇಂಡಿಯನ್ ಸಮುದಾಯಗಳಿಂದ ವಿವಿಧ ಯೋಜನೆಗಳ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಶ್ರಮ ಶಕ್ತಿ ಯೋಜನೆ, ಶ್ರಮಶಕ್ತಿ (ವಿಶೇಷ ಮಹಿಳಾ ಯೋಜನೆ), ಗಂಗಾ ಕಲ್ಯಾಣ ಯೋಜನೆ, ಟ್ಯಾಕ್ಸಿ, ಗೂಡ್ಸ್, ಆಟೋರಿಕ್ಷ ವಾಹನ ಖರೀದಿಸಲು ಸಹಾಯಧನ ಯೋಜನೆ, ವೃತ್ತಿಪ್ರೋತ್ಸಾಹ ಯೋಜನೆ, ಅರಿವು ಸಿಇಟಿ, ನೀಟ್(ಅಇಖಿ/ಓಇಇಖಿ) ವಿದ್ಯಾಭ್ಯಾಸ ಸಾಲ ಯೋಜನೆ ನವೀಕರಣ(ರಿನ್ಯೂವಲ್), ಸಮುದಾಯ ಆಧಾರಿತ ತರಬೇತಿ ಯೋಜನೆಗಳಡಿ ಸಾಲ ಸೌಲಭ್ಯವನ್ನು ನೀಡಲಾಗುವುದು. ಅರ್ಹ ಮತ್ತು ಆಸಕ್ತರು ಸೆಪ್ಟೆಂಬರ್ 25 ರೊಳಗಾಗಿ ವೆಬ್‌ಸೇಟ್ https://kmdconline.karnataka.gov.in ಮೂಲಕ ಅರ್ಜಿ ಸಲ್ಲಿಸಿ ಅರ್ಜಿ ಪ್ರಿಂಟ್ ಪಡೆದು, ಅಗತ್ಯ ದಾಖಲೆಗಳೊಂದಿಗೆ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ(ನಿ), ಜಿಲ್ಲಾ ಕಛೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ(ನಿ), ಕುರುಬರ ಹಾಸ್ಟೇಲ್ ಕಟ್ಟಡ ಜಯದೇವ ಸರ್ಕಲ್ ದೂ.ಸಂ, 08192 232349 ಗೆ ಸಂಪರ್ಕಿಸಿ.

## ಪ್ರಮುಖ ಸುದ್ದಿ

# 30 ರಂದು ಗೃಹಲಕ್ಷ್ಮೀ ಯೋಜನೆ ಚಾಲನೆ: ನೇರ ಪ್ರಸಾರ

» **ಚಿತ್ರದುರ್ಗ**

ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಯಾದ ಗೃಹಲಕ್ಷ್ಮೀ ಯೋಜನೆಗೆ ಆ.30 ರಂದು ಮೈಸೂರಿನಲ್ಲಿ ಚಾಲನೆ ದೊರೆಯಲಿದೆ. ಈ ಕಾರ್ಯಕ್ರಮವನ್ನು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಏಕಕಾಲಕ್ಕೆನೇರಪ್ರಸಾರಮಾಡಲಾಗುವುದು ಈ ಹಿನ್ನಲೆಯಲ್ಲಿ ಜಿಲ್ಲಾಡಳಿತ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಇಲಾಖೆ ಹಾಗೂ ಚಿತ್ರದುರ್ಗ ನಗರ ಸಭೆ ವತಿಯಿಂದ ಆ.30 ರಂದು ಬೆಳಿಗ್ಗೆ 11:30ಕ್ಕೆ ನಗರದ ತರಾಸು ರಂಗಮಂದಿರಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕೇಂದ್ರ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಖಾತೆ ಸಚಿವ ಎ.ನಾರಯಣಸ್ವಾಮಿ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಕಾರ್ಯಕ್ರಮ ಉದ್ಘಾಟಿಸಿ, ಜಿಲ್ಲೆಯಲ್ಲಿ ಗೃಹಲಕ್ಷ್ಮೀ ಯೋಜನೆಗೆ ಚಾಲನೆ ನೀಡುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಶಾಸಕರಾದ




ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಎಂ.ಚಂದ್ರಪ್ಪ, ಎನ್.ವೈ.ಗೋಪಾಲಕೃಷ್ಣ, ವಿಧಾನ ಪರಿಷತ್ ಸದಸ್ಯರಾದ ವೈ.ಎ.ನಾರಾಯಣಸ್ವಾಮಿ, ಚಿದಾನಂದ ಎಂ.ಗೌಡ, ಕೆ.ಎಸ್.ನವೀನ್ ಮುಖ್ಯ ಅತಿಥಿಗಳಾಗಿ ಭಾಗಹಿಸುವರು.

ಪ್ರಾದೇಶಿಕ ಆಯುಕ್ತ ಅಮ್ಲಾನ್ ಆದಿತ್ಯ ಬಿಸ್ವಾಸ್, ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ, ಜಿ.ಪಂ.ಸಿಇಓ ಎಸ್.ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ಅಧೀಕ್ಷಕ ಧರ್ಮೇಂದರ್ ಕುಮಾರ್ ಮೀನಾ ಸೇರಿದಂತೆ ನಗರ ಸಭೆಯ ಸರ್ವ ಸದಸ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು.

**ಜಿಲ್ಲೆಯಲ್ಲಿ 3.54 ಲಕ್ಷ ನೋಂದಣಿ : 189 ಗ್ರಾ.ಪಂ.ಗಳಲ್ಲಿ ನೇರ ಪ್ರಸಾರ**

ಗೃಹಲಕ್ಷ್ಮೀ ಯೋಜನೆಗೆ ಜಿಲ್ಲೆಯಲ್ಲಿ ಉತ್ತಮ ಪತ್ರಿಕ್ರಿಯೆ ದೊರೆತಿದೆ. ನಗರ ಪ್ರದೇಶದಲ್ಲಿ 59,310 ಹಾಗೂ ಗ್ರಾಮೀಣ ಭಾಗದಲ್ಲಿ 2,95,576 ಸೇರಿ ಒಟ್ಟು 3,54,886 ಮಹಿಳೆಯುರು ಯೋಜನೆಗೆ ನೊಂದಾಯಿಸಿಕೊಂಡಿದಾರೆ. ಚಿತ್ರದುರ್ಗ ತಾಲ್ಲೂಕು 82,536 ಚಳ್ಳಕೆರೆ ತಾಲ್ಲೂಕು 76,986 ಹಿರಿಯೂರು ತಾಲ್ಲೂಕು 63,565 ಹೊಳಲ್ಕೆರೆ ತಾಲ್ಲೂಕು 46,999 ಹೊಸದುರ್ಗ ತಾಲ್ಲೂಕು 50,580 ಹಾಗೂ ಮೊಳಕಾಲ್ಮೂರು ತಾಲ್ಲೂಕಿನಲ್ಲಿ 34,220 ಮಹಿಳೆಯರು ನೋಂದಾಯಿಸಿದ್ದಾರೆ. ಜಿಲ್ಲೆಯ 189 ಗ್ರಾಮ ಪಂಚಾಯತಿಗಳಲ್ಲೂ ಕಾರ್ಯಕ್ರಮದ ನೇರಪ್ರಸಾರ ಮಾಡಲಾಗುವುದು.

### ಆಗಸ್ಟ್ 30 ರಂದು ದಾವಣಗೆರೆ ಜಿಲ್ಲೆಯಾದ್ಯಂತ ಗೃಹಲಕ್ಷ್ಮಿಗೆ ಚಾಲನೆ

**ದಾವಣಗೆರೆ:** ಕರ್ನಾಟಕ ಸರ್ಕಾರದ ಮಹತ್ವಕಾಂಕ್ಷೆ ಯೋಜನೆಯಾದ ಗೃಹಲಕ್ಷ್ಮಿ ಯೋಜನೆಗೆ ಆಗಸ್ಟ್ 30 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಹದಡಿ ರಸ್ತೆಯಲ್ಲಿರುವ ಶಾಮನೂರು ಶಿವಶಂಕರಪ್ಪ ಪಾರ್ವತಮ್ಮ ಸಮುದಾಯ ಭವನದಲ್ಲಿ ಜಿಲ್ಲಾ ಮಟ್ಟದಲ್ಲಿ ಚಾಲನೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಕಾರ್ಯಕ್ರಮ ಉದ್ಘಾಟಿಸಲಿದ್ದು, ಏಕಕಾಲಕ್ಕೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಹಾಗೂ ನಗರದ 11 ಕಡೆ ವಿವಿಧ ಸ್ಥಳಗಳಲ್ಲಿ ಹಾಗೂ ಜಗಳೂರು. ಹರಿಹರ, ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕುಗಳ ನಗರ ಸ್ಥಳೀಯ ಸಂಸ್ಥೆಗಳ ಸಹಯೋಗದಲ್ಲಿ ನಗರ ಪ್ರದೇಶಗಳ ವಾರ್ಡ್‌ಗಳಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ. ಜಿಲ್ಲೆಯಲ್ಲಿ ಇಲ್ಲಿಯವರೆಗೆ 3,27,870 ಫಲಾನುಭವಿಗಳು ನೋಂದಣಿ ಮಾಡಿಕೊಂಡಿದ್ದು, ಒಟ್ಟು ಶೇ, 87.93 ರಷ್ಟು ನೋಂದಣಿ ಪೂರ್ಣಗೊಂಡಿರುತ್ತದೆ. ಗೃಹಲಕ್ಷ್ಮಿ ಯೋಜನೆಯಡಿ ನೋಂದಣಿ ಮಾಡಿಸಿದ ಕುಟುಂಬದ ಯಜಮಾನಿ ಮಹಿಳೆಗೆ ರೂ. 2,000 ಗಳನ್ನು ನೇರವಾಗಿ ಡಿಬಿಟಿ ಮೂಲಕ ಅವರ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗುತ್ತದೆ. ನಗರದಲ್ಲಿ ಜರುಗುವ ಕಾರ್ಯಕ್ರಮ ಸ್ಥಳಗಳು: ಮಹಾನಗರ ಪಾಲಿಕೆ ಕಛೇರಿ, ಪಿ.ಬಿ ರಸ್ತೆ ವಾರ್ಡ್ ನಂ.25, 17, ಮಹಾನಗರ ಪಾಲಿಕೆ ಕಛೇರಿ 3 ವಿಭಾಗ ವಾರ್ಡ್ ನಂ.25, ನೂರಾನಿ ಶಾದಿ ಮಹಲ್, ಇಮಾಂ ನಗರ, ವಾರ್ಡ್ ನಂ.11, ಆಯಿಷಾ ಶಾದಿಮಹಲ್, ಅಕ್ಸ ಮಸೀದಿ ಪಕ್ಕ, ವಾರ್ಡ್ ನಂ.12, ಚನ್ನಗಿರಿ ವಿರುಪಾಕ್ಷಪ್ಪ ಕಲ್ಯಾಣ ಮಂದಿರ, ಗಡಿಯಾರ ಕಂಬದ ಹತ್ತಿರ ವಾರ್ಡ್ ನಂ. 18, ಮಲ್ಲಿಕಾರ್ಜುನ ಸಮುದಾಯ ಭವನ, ಆರ್.ಎಂ.ಸಿ. ರಸ್ತೆ ಇಲ್ಲಿ ಕಾರ್ಯಕ್ರಮ ನಡೆಯಲಿದೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T